ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೯

# ಪಟ್ಟಿ – ೦೯

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**
**ಮುಂದುವರೆದ ಉಪವೇಶನ**

**ಮಂಗಳವಾರ, ದಿನಾಂಕ : ೦೯ನೇ ಮಾರ್ಚ್, ೨೦೨೧**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ಸಕ್ಕರೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

೭. ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು.

---

## ಬೀದರ್ ಜಿಲ್ಲೆಯ ಸಣ್ಣ ಕೈಗಾರಿಕೆ ಮತ್ತು ಅವುಗಳಲ್ಲಿ ಹೂಡಲಾದ ಬಂಡವಾಳದ ಕುರಿತು

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೨ (೮೭೫) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳಿಂದ ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭಿಸಲಾದ ಸಣ್ಣ ಕೈಗಾರಿಕೆ/ಉದ್ಯಮಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಈ ಕೈಗಾರಿಕೆಗಳಿಗೆ ಉದ್ಯಮದಾರರು ಹೂಡಲಾದ ಬಂಡವಾಳ ಎಷ್ಟು ; (ಕೈಗಾರಿಕಾವಾರು, ಉದ್ಯಮವಾರು ವಿವರವಾದ ಮಾಹಿತಿ ನೀಡುವುದು)

(ಇ) ಸಣ್ಣ ಕೈಗಾರಿಕೆ ಉದ್ಯಮಗಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳಾವುವು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಕೈಗಾರಿಕೆಗಳಿಗೆ ಸರ್ಕಾರದಿಂದ ಸಬ್ಸಿಡಿ ನೀಡಲಾಗಿದೆಯೇ ? (ಕೈಗಾರಿಕೆವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಜಮೀನು ನೀಡಿರುವ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೩ (೮೭೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷ ಬೀದರ್ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರದಿಂದ ಯಾವ ಯಾವ ಕಂಪನಿಗಳಿಗೆ/ ಕಾರ್ಖಾನೆಗಳಿಗೆ/ಸಂಸ್ಥೆಗಳಿಗೆ ಎಷ್ಟೆಷ್ಟು ಎಕರೆ ಜಮೀನು ನೀಡಲಾಗಿದೆ ; (ಕಂಪನಿ ಮಾಲೀಕರು/ಕಾರ್ಖಾನೆ/ಸಂಸ್ಥೆ ಹೆಸರು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕಂಪನಿಗಳಿಗೆ ಕೈಗಾರಿಕೆ ಸ್ಥಾಪಿಸುವ ಉದ್ದೇಶಕ್ಕೆ ರಿಯಾಯಿತಿ ದರದಲ್ಲಿ ಯಾವ ಯಾವ ಸೌಲಭ್ಯಗಳನ್ನು ಸರ್ಕಾರ ಒದಗಿಸಿಕೊಟ್ಟಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದಿಂದ ನೀಡಿರುವ ಜಮೀನನ್ನು ಸಂಪೂರ್ಣವಾಗಿ ಸದರಿ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಈ) ಕೈಗಾರಿಕೆಗಳನ್ನು ಸ್ಥಾಪಿಸಲು ಕೊಟ್ಟಿರುವ ಜಮೀನನ್ನು ಬಳಸಿಕೊಳ್ಳದಿರುವ ಸಂಸ್ಥೆಗಳೆಷ್ಟು ; ಅಂತಹ ಸಂಸ್ಥೆಗಳಿಗೆ ಎಷ್ಟು ಎಕರೆ ಜಮೀನನ್ನು ನೀಡಿದೆ ಮತ್ತು ಇತರೆ ರಿಯಾಯಿತಿ ಸೌಲಭ್ಯಗಳನ್ನು ನೀಡಲಾಗಿದೆ ಎಂಬ ಬಗ್ಗೆ ಪೂರ್ಣ ಮಾಹಿತಿ ನೀಡುವುದು ;

(ಉ) ಕಳೆದ ಎರಡು ವರ್ಷಗಳಲ್ಲಿ ಜಿಲ್ಲೆಯಲ್ಲಿ ಈಗಾಗಲೇ ಸ್ಥಾಪನೆಗೊಂಡಿರುವ ಕಂಪನಿ/ಕಾರ್ಖಾನೆ/ಸಂಸ್ಥೆಗಳಿಂದ ಎಷ್ಟು ಪ್ರಮಾಣದಲ್ಲಿ ಉದ್ಯೋಗಗಳು ಸೃಷ್ಠಿಯಾಗಿವೆ ಮತ್ತು ಈ ಉದ್ಯೋಗಗಳಲ್ಲಿ ಸ್ಥಳೀಯರಿಗೆ ನೀಡಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ? (ಸಂಪೂರ್ಣವಾದ ವಿವರವನ್ನು ಹಾಗೂ ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಮರಳು ಅಭಾವದಿಂದ ಉಂಟಾಗಿರುವ ಸಮಸ್ಯೆ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೪ (೮೭೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಮರಳು ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗಾಗಿ ರೂಪಿಸಿರುವ ನೀತಿಗಳು/ ನಿಯಮಗಳೇನು ; ಅವು ಯಾವುವು ;

(ಆ) ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮರಳು ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಮರಳು ಪೂರೈಕೆಯ ಸ್ಥಳಗಳು ಯಾವುವು ಮತ್ತು ಸರ್ಕಾರ ಪ್ರತಿ ಟನ್ ಮರಳಿಗೆ ನಿಗದಿಪಡಿಸಿರುವ ದರ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಮರಳುಗಾರಿಕೆ (ಬ್ಲಾಕ್ ಸ್ಯಾಂಡ್) ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; ಎಷ್ಟು ಟನ್ ಮರಳು ಜಪ್ತಿ ಮಾಡಿಕೊಳ್ಳಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿರುವ ಪುರಸಭೆ ಮತ್ತು ನಗರಸಭೆಗಳ ಅನುದಾನದ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೫ (೮೭೮) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಬರುವ ಪುರಸಭೆಗಳಲ್ಲಿ ೨೦೧೮-೧೯ ರಿಂದ ೨೦೨೦-೨೧ರ ವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ಕಾರ್ಯಕ್ರಮಗಳ ಸಂಪೂರ್ಣ ವಿವರ ನೀಡುವುದು)

(ಆ) ಎಲ್ಲಾ ಪುರಸಭೆ ಮತ್ತು ನಗರ ಸಭೆಗಳಲ್ಲಿ ಮಂಜೂರಾಗಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಯೋಜನೆ ಸರ್ಕಾರದ ಮುಂದಿದೆಯೇ ; ಹೊರ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ನಿಯಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಎಲ್ಲಾ ಪುರಸಭೆಗಳಲ್ಲಿ ಚಾಲ್ತಿಯಿರುವ ಕಾರ್ಯಕ್ರಮಗಳು/ ಕಾಮಗಾರಿಗಳಾವುವು ? (ನಗರಸಭೆ ಮತ್ತು ಪುರಸಭೆವಾರು ವಿವರ ನೀಡುವುದು)

## ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನ ಬೀದರ್ ಜಿಲ್ಲೆಗೆ ಬಂದಿರುವ ಅನುದಾನದ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬೬ (೮೭೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಬಂದಿರುವ ಅನುದಾನವು ಯಾವ ಯಾವ ಕಾರ್ಯಕ್ರಮಗಳಿಗೆ ಖರ್ಚಾಗಿರುತ್ತದೆ ಹಾಗೂ ಉಳಿದ ಅನುದಾನ ಎಷ್ಟು ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಕೋ-ಆಪರೇಟಿವ್ ಸೊಸೈಟಿಗಳೆಷ್ಟು ; ಕಳೆದ ವರ್ಷಗಳಿಂದ

ಅನುದಾನ ನೀಡಿರುವ ಬಗ್ಗೆ ಹಾಗೂ ಅನುದಾನ ಪಡೆಯಲು ಸರ್ಕಾರದ ಮಾನದಂಡಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಲ್ಲಿ ನಿರ್ದೇಶಕರಾಗಲು ರೋಸ್ಟರ್ ಪದ್ಧತಿ ಇಲ್ಲವೇ ; ಇಲ್ಲದಿದ್ದರೆ, ಮಾಡುವ ಯೋಚನೆ ಸರ್ಕಾರದ ಮುಂದಿದೆಯೇ ;

(ಈ) ರೋಸ್ಟರ್ ಇಲ್ಲದಿದ್ದಕ್ಕೆ ಎಸ್.ಸಿ/ಎಸ್.ಟಿ. ಮೈನಾರಿಟಿ ಮತ್ತು ಮಹಿಳೆಯರಿಗೆ ಸಾಲ ಸೌಲಭ್ಯ ದೊರೆಯುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸಹಕಾರ ಸಂಘಗಳ ರಾಜ್ಯ ವಲಯ ಯೋಜನೆಗಳಲ್ಲಿ ವಿವಿಧ ಸಹಕಾರಿ ಸಂಘಗಳಲ್ಲಿ ಎಷ್ಟು ಬಿ.ಪಿ.ಎಲ್., ಎಸ್.ಸಿ./ಎಸ್.ಟಿ./ ಓ.ಬಿ.ಸಿ., ಮೈನಾರಿಟಿ ಮಹಿಳೆ ಮತ್ತು ಅಂಗವಿಕಲ ವರ್ಗಗಳಿವೆ ; ಎಷ್ಟು ಜನರನ್ನು ಸದಸ್ಯತ್ವ ಮಾಡಿ ಸಾಲ ನೀಡಲಾಗಿದೆ ; (ವಿವರವಾದ ತಾಲ್ಲೂಕು ಮತ್ತು ಸೊಸೈಟಿವಾರು ಮಾಹಿತಿ ನೀಡುವುದು)

(ಊ) ಸಹಕಾರ ಸಂಘಗಳಲ್ಲಿ (ಸೊಸೈಟಿ) ಎಷ್ಟು ಪ್ರತಿಶತ ಸದಸ್ಯತ್ವ ಈ ವರ್ಗದ ಜನರಿಗೆ ನೀಡಬೇಕೆನ್ನುವ ನಿಯಮವಿದೆ ?

## ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೭ (೮೫೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಪಡಿತರ ವಿತರಣೆಗೆ ಸಂಬಂಧಿಸಿದಂತೆ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಎಷ್ಟು ದೂರುಗಳು ದಾಖಲಾಗಿವೆ; (ತಾಲ್ಲೂಕುವಾರು, ಪ್ರಕರಣವಾರು ವಿವರ ನೀಡುವುದು)

(ಆ) ಸದರಿ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ನಾಗಮಂಗಲ ತಾಲ್ಲೂಕು, ಬಿಂಡಿಗನವಿಲೆ ಹೋಬಳಿ, ಕಂಬದಹಳ್ಳಿ ಗ್ರಾಮದ ನ್ಯಾಯಬೆಲೆ ಅಂಗಡಿ ಮಾಲೀಕರ ವಿರುದ್ಧ ಫೋರ್ಜರಿ ಸಹಿ ಮಾಡಿ ರೇಷನ್ ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ನ್ಯಾಯಬೆಲೆ ಅಂಗಡಿ ಮಾಲೀಕರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಬಡ ಕುಟುಂಬ ನಿವಾಸಿಗಳಿಗೆ ಮನೆ ಹಕ್ಕುಪತ್ರ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೬೮ (೮೫೧) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ಪುರಸಭೆ ವ್ಯಾಪ್ತಿಯ ೧ನೇ ವಾರ್ಡಿನ ವ್ಯಾಪ್ತಿಯಲ್ಲಿ ಸುಮಾರು ಕಳೆದ ೨೦-೨೫ ವರ್ಷಗಳಿಂದ ವಾಸ ಮಾಡುತ್ತಿರುವ ೫೦-೬೦ ಬಡ ಕುಟುಂಬ ನಿವಾಸಿಗಳಿಗೆ ಇಲ್ಲಿಯವರೆವಿಗೂ ಮನೆ ಹಕ್ಕುಪತ್ರ ವಿತರಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ನಾಗಮಂಗಲ ಪುರಸಭೆ ೧ನೇ ವಾರ್ಡ್‌ನಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ನಾಗಮಂಗಲ ಪುರಸಭೆ ವ್ಯಾಪ್ತಿಯಲ್ಲಿ ಮನೆ ರಹಿತರಿಗೆ ಹಾಗೂ ಸ್ಲಂ ನಿವಾಸಿಗಳಿಗೆ ಯಾವ ಯಾವ ವರ್ಷಗಳಲ್ಲಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ? (ಫಲನುಭವಿಗಳ ಹೆಸರು ಮತ್ತು ವಿಳಾಸ ನೀಡುವುದು)

## ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೯ (೮೫೨) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಮತ್ತು ಖಾಸಗಿ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಸರ್ಕಾರಿ ವ್ಯಾಪ್ತಿಯ ಎಷ್ಟು ಕಾರ್ಖಾನೆಗಳನ್ನು ಖಾಸಗಿ ಸಹಭಾಗಿತ್ವಕ್ಕೆ ನೀಡಲಾಗಿದೆ ; ಯಾರಿಗೆ/ಯಾವ ಸಂಸ್ಥೆಗೆ ನೀಡಲಾಗಿದೆ ; ಲೀಸ್ ನೀಡಿದ್ದಲ್ಲಿ, ಲೀಸ್‌ನ ಅವಧಿ ಎಷ್ಟು ; (ವಿವರ ನೀಡುವುದು)

(ಆ) ಮಂಡ್ಯ ಸಕ್ಕರೆ ಕಾರ್ಖಾನೆ ಪ್ರಾರಂಭವಾಗುವುದು ಯಾವಾಗ ; ಈ ಹಿಂದಿನ ಸರ್ಕಾರ ಕಾರ್ಖಾನೆ ಪ್ರಾರಂಭಿಸಲು ಕ್ರಿಯಾಯೋಜನೆ

ಸಿದ್ದಪಡಿಸಿ ಪ್ರಾರಂಭ ಮಾಡಲು ಅಗತ್ಯ ಅನುದಾನದ ಬಿಡುಗಡೆ ಮಾಡಲಾಗಿದ್ದರೂ ಸಕ್ಕರೆ ಕಾರ್ಖಾನೆ ಪ್ರಾರಂಭಿಸದಿರಲು ಕಾರಣವೇನು ;

(ಇ) ಈ ಭಾಗದಲ್ಲಿ ರೈತರು ಬೆಳೆಯುವ ಕಬ್ಬನ್ನು ಪ್ರಸ್ತುತ ಯಾವ ರೀತಿಯಲ್ಲಿ ವಿಲೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಕಬ್ಬು ಬೆಳೆದು ನಷ್ಟದಲ್ಲಿರುವ ರೈತರಿಗೆ ವಿಶೇಷ ಪ್ಯಾಕೇಜ್ ಅಥವಾ ಪರಿಹಾರ ಘೋಷಣೆ ಮಾಡಲಾಗಿದೆಯೇ ; ಹಾಗಿದ್ದರೆ, ಈವರೆವಿಗೆ ಎಷ್ಟು ಫಲಾನುಭವಿಗಳಿಗೆ ಪರಿಹಾರದ ಮೊತ್ತ ವಿತರಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ವೃಂದ ಮತ್ತು ನೇಮಕಾತಿ ನಿಯಮವಳಿಗಳನ್ನು ೩೩ ವರ್ಷ ಕಳೆದರೂ ಸಹ ತಿದ್ದುಪಡಿ ಮಾಡದಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೦ (೮೫೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ಈ ಹಿಂದೆಯೇ ಡಿ.ಪಿ.ಎ.ಆರ್., ಡಿ.ಪಿ.ಎಲ್ ಮತ್ತು ಹಣಕಾಸು ಇಲಾಖೆಯಿಂದ ಅಭಿಪ್ರಾಯಗಳ ಸಲ್ಲಿಕೆಯಾಗಿದ್ದರೂ ಸಹ ತಿದ್ದುಪಡಿ ಪ್ರಕ್ರಿಯೆಯ ವಿಳಂಬವಾಗಲು ಕಾರಣವೇನು ; (ವಿವರ ನೀಡುವುದು)

(ಆ) ಜ್ಯೇಷ್ಠತೆಯಲ್ಲಿ ಹಿರಿಯರಾಗಿರುವ ಸಿ.ಡಿ.ಓ. ಗಳನ್ನು ಕೈಬಿಟ್ಟು ಕಿರಿಯರಾಗಿವವರಿಗೆ ನಿಬಂಧಕರ ಹುದ್ದೆಗೆ ಮುಂಬಡ್ತಿ ನೀಡಿದ್ದು ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರುರವರು ಪದೋನ್ನತಿ ನೀಡಿರುವ ಆದೇಶವನ್ನು ರದ್ದುಪಡಿಸಲು ಸರ್ಕಾರ ಕ್ರಮಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು)

(ಇ) ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮವಳಿಗಳನ್ನು ೩೩ ವರ್ಷ ಕಳೆದರೂ ಸಹ ತಿದ್ದುಪಡಿ ಮಾಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ತಿದ್ದುಪಡಿಯನ್ನು ಯಾವ ಕಾಲಾಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ದಿನಾಂಕ : ೧೭-೦೮-೨೦೧೭ರ ಕೆ.ಎ.ಟಿ., ಬೆಂಗಳೂರು ಆದೇಶದಂತೆ ಪದೋನ್ನತಿಯಿಂದ ವಂಚಿತರಾಗಿರುವವರಿಗೆ ಪದೋನ್ನತಿ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ; (ವಿವರ ನೀಡುವುದು) ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು ?

## ರಸ್ತೆಗಳ ಅಭಿವೃದ್ಧಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೧ (೭೯೫) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆ ದೇವದುರ್ಗ ಪುರಸಭೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಸ್ತೆ ಅಭಿವೃದ್ಧಿ ಪಡಿಸಲು ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಇ) ಸದರಿ ರಸ್ತೆ ಕಾಮಗಾರಿಗಳನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ? (ವಿವರ ನೀಡುವುದು)

## ನಗರಾಭಿವೃದ್ಧಿ ಇಲಾಖೆಯಿಂದ ಅನುದಾನ ಬಿಡುಗಡೆ ಮಾಡಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೨ (೭೯೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಪಟ್ಟಣದ ಅಭಿವೃದ್ಧಿಗಾಗಿ ನಗರಾಭಿವೃದ್ಧಿ ಇಲಾಖೆಯಿಂದ. ಕಳೆದ ೦೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವನ್ನು ಯಾವುದಕ್ಕೆ ಎಷ್ಟೆಷ್ಟು ಹಣ ಬಳಕೆ ಮಾಡಿಕೊಳ್ಳಲಾಗಿದೆ ; (ವಿವರ ಒದಗಿಸುವುದು)

(ಆ) ಪಟ್ಟಣದ ಅಭಿವೃದ್ಧಿಗಾಗಿ ವಿಶೇಷ ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ವಿವರ ಒದಗಿಸುವುದು ?

## ಯು.ಜಿ.ಡಿ., ಕಾಮಗಾರಿ ಮಂದಗತಿಯಲ್ಲಿ ನಡೆದಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೩ (೭೯೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೦೨ ವರ್ಷಗಳಿಂದ ರಾಯಚೂರು ಪಟ್ಟಣದಲ್ಲಿ ಯು.ಜಿ.ಡಿ., ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಕಾಮಗಾರಿ ವಿಳಂಬಕ್ಕೆ ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ಮತ್ತು ಸದರಿ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಪಡಿತರ ಚೀಟಿ ಅರ್ಜಿ ಸಲ್ಲಿಸುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೪ (೭೯೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೊಸದಾಗಿ ಪಡಿತರ ಚೀಟಿ ಪಡೆಯಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆ ಪ್ರಾರಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆನ್‌ಲೈನ್ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭಿವಾಗಿರುವುದರಿಂದ ಹಾಗೂ ಹಳ್ಳಿಗಳಲ್ಲಿ ವಿದ್ಯುತ್ ಸಮಸ್ಯೆ ಮತ್ತು ಇಂಟರ್‌ನೆಟ್ ಸಮಸ್ಯೆಯಿರುವುದರಿಂದ ಹಳ್ಳಿಯ ಜನರಿಗೆ ಅರ್ಜಿ ಸಲ್ಲಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಹಳ್ಳಿಗಳಲ್ಲಿ ಸರ್ಕಾರದ ವತಿಯಿಂದ ಕ್ಯಾಂಪ್ ನಡೆಸುವ ಮೂಲಕ ಸರಳ ವಿಧಾನ ನಡೆಸಲು ಸಾಧ್ಯವಿಲ್ಲವೇ ?

## ಸಣ್ಣ ಕೈಗಾರಿಕೆಗಳ ಸುಧಾರಣೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೫ (೮೩೧) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರದ ನೀತಿ ಹಾಗೂ ಹಲವಾರು ಕಾರಣಗಳಿಂದ ಸಣ್ಣ ಕೈಗಾರಿಕೆಗಳು ಸಂಕಷ್ಟಗಳನ್ನು ಎದುರಿಸುತ್ತಿದ್ದು ಇದರ ಪುನಶ್ವೇತನಕ್ಕೆ ಸರ್ಕಾರ ಯಾವುದಾದರೂ ಯೋಜನೆ ರೂಪಿಸಿದೆಯೇ ;

(ಆ) ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಹಾಗೂ ಸುಧಾರಣೆಗಾಗಿ ಸರ್ಕಾರದ ಮುಂದಿರುವ ಕಾರ್ಯಕ್ರಮಗಳಾವುವು ; ಹಾಗೂ ಸಹಾಯಧನ ನೀಡುವ ಯೋಜನೆ ಇದೆಯೇ ;

(ಇ) ಸಣ್ಣ ಕೈಗಾರಿಕೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಹಿತದೃಷ್ಟಿಯಿಂದ ಯಾವುದಾದರೂ ಹೊಸ ಯೋಜನೆ ರೂಪಿಸಲಾಗಿದೆಯೇ ? (ವಿವರಗಳನ್ನು ನೀಡುವುದು)

## ಅಳತೆ ಮತ್ತು ತೂಕದಲ್ಲಿ ಗ್ರಾಹಕರಿಗೆ ಅನ್ಯಾಯ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೬ (೮೩೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಹಾರ ಸಾಮಗ್ರಿ, ತರಕಾರಿ ಮತ್ತು ಹಣ್ಣು ವ್ಯಾಪಾರಗಾರರು ಬಳಸುವ ತಕ್ಕಡಿಗಳು ಮತ್ತು ಬಟ್ಟುಗಳು ದೋಷಪೂರಿತವಾಗಿದ್ದು, ಇದರ ಬಗ್ಗೆ ತಪಾಸಣೆ ಮಾಡಿ ಕ್ರಮ ಕೈಗೊಳ್ಳಲು ಇಲಾಖೆಯಲ್ಲಿ ಯಾವ ವ್ಯವಸ್ಥೆ ಇದೆ ;

(ಆ) ಬೀದಿ ಬದಿ ವ್ಯಾಪಾರಿಗಳು ಉಪಯೋಗಿಸುವ ತಕ್ಕಡಿ ಮತ್ತು ಬಟ್ಟುಗಳನ್ನು ತಪಾಸಣೆ ಮಾಡಿ ಕ್ರಮ ಕೈಗೊಂಡಿರುವ ಪ್ರಕರಣಗಳು ಎಷ್ಟು ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಇ) ವ್ಯಾಪಾರಗಾರರು/ಪೆಟ್ರೋಲ್ ಬಂಕ್ ಮಾಲೀಕರು ತೂಕ ಮತ್ತು ಅಳತೆಯಲ್ಲಿ ಗ್ರಾಹಕರಿಗೆ ವಂಚಿಸುತ್ತಿದ್ದು, ಇದರ ಬಗ್ಗೆ ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳುವುದೇ ?

## ಬಿ.ಪಿ.ಎಲ್ ಕಾರ್ಡ್ ವಿತರಣೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೭ (೮೩೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿ.ಪಿ.ಎಲ್ ಕಾರ್ಡ್‌ಗಳನ್ನು ಟಿ.ವಿ. ಬೈಕ್ ಮತ್ತು ಫ್ರಿಡ್ಜ್ ಹೊಂದಿರುವವರಿಗೆ ನೀಡುವುದಿಲ್ಲ ಎಂದು ಆಹಾರ ಮಂತ್ರಿಗಳು ಹೇಳಿಕೆ ನೀಡಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ;

(ಆ) ಈ ಹೇಳಿಕೆ ವಿರುದ್ಧ ಸಾರ್ವಜನಿಕರು ಮತ್ತು ಶಾಸಕರು ಅಸಮಾಧಾನ ವ್ಯಕ್ತಪಡಿಸಿರುವ ಬಗ್ಗೆ ಸರ್ಕಾರದ ಅಂತಿಮ ನಿರ್ಧಾರವೇನು ; ಈ ಬಗ್ಗೆ ಆದೇಶ ಹೊರಡಿಸಲಾಗುವುದೇ ;

(ಇ) ಬಿ.ಪಿ.ಎಲ್. ಕಾರ್ಡ್‌ಗಳನ್ನು ಹೊಂದಿರುವ ಅರ್ಹರಲ್ಲದವರಿಂದ ಕಾರ್ಡ್ ವಾಪಸ್ ಪಡೆಯುವ ನಿಟ್ಟಿನಲ್ಲಿ ಸರ್ಕಾರ ಕಠಿಣ ಕ್ರಮ ಕೈಗೊಂಡು ಅರ್ಹ ಕುಟುಂಬಗಳಿಗೆ ಮಾತ್ರ ನೀಡಲು ಕ್ರಮ ಕೈಗೊಳ್ಳಲಾಗುವುದೇ ?

## ಕೆ.ಐ.ಎ.ಡಿ.ಬಿ. ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೮ (೮೨೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು ; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ ; ಈ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯ ಕಾಮಗಾರಿಗಳು ಕಳಪೆ ಗುಣಮಟ್ಟ ಹೊಂದಿವೆಯೆಂದು ಸಾರ್ವಜನಿಕರಿಂದ ದೂರುಗಳು ಬಂದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ದೂರುಗಳು ಬಂದಿದ್ದಲ್ಲಿ, ಸದರಿ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರು/ಏಜೆನ್ಸಿಗಳು ಮತ್ತು ಕಾಮಗಾರಿಗಳ ಮೇಲ್ವಿಚಾರಣೆ ವಹಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಪ್ರಕರಣವಾರು ವಿವರ ನೀಡುವುದು)

## ಅಕ್ರಮ ಕಲ್ಲು ಗಣಿಗಾರಿಕೆ ನಿಯಂತ್ರಣದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೯ (೭೮೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖನಿಜ ಪರವಾನಗಿ ಇಲ್ಲದೆ ನಡೆಸುತ್ತಿರುವ ಅಕ್ರಮ ಕಲ್ಲು ಗಣಿಗಾರಿಕೆ ನಿಯಂತ್ರಣಕ್ಕೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಆ) ಅಕ್ರಮ ಕಲ್ಲು ಗಣಿಗಾರಿಕೆ ನಿಯಂತ್ರಣಕ್ಕೆ ಡ್ರೋನ್ ಸಮೀಕ್ಷೆ ಕೈಗೊಳ್ಳಲು ೨೦೨೦–೨೧ನೇ ಸಾಲಿನಲ್ಲಿ ಮಂಜೂರಾದ ಅನುದಾನವೆಷ್ಟು ; ಈ ಸಮೀಕ್ಷೆಯನ್ನು ಯಾವ ಯಾವ ಜಿಲ್ಲೆಗಳಲ್ಲಿ ನಡೆಸಲಾಗಿದೆ ; ಈ ಸಮೀಕ್ಷೆಯಿಂದ ಎಷ್ಟು ಅಕ್ರಮ ಕಲ್ಲು ಗಣಿಗಾರಿಕೆಗಳನ್ನು ಗುರುತಿಸಲಾಗಿದೆ ; (ಅವುಗಳ ವಿವರವನ್ನು ಜಿಲ್ಲಾವಾರು ನೀಡುವುದು)

(ಇ) ಗಣಿಗಾರಿಕೆಯಿಂದ ತೊಂದರೆಗೊಳಗಾದ ಪ್ರದೇಶಗಳ ಅಭಿವೃದ್ಧಿ ಮತ್ತು ಜನರ ಜೀವನ ಮಟ್ಟ ಸುಧಾರಣೆಗೆ ಗುತ್ತಿಗೆದಾರರಿಂದ ಜಿಲ್ಲಾ ನಿಧಿಗೆ ರಾಜಧನ ಸಂಗ್ರಹ ಮಾಡಲಾಗುತ್ತಿದೆಯೇ ? (ಮಾಡುತ್ತಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಸಂಗ್ರಹವಾದ ಮತ್ತು ಬಳಕೆ ಮಾಡಿರುವ ವಂತಿಗೆಯ ವಿವರವನ್ನು ಜಿಲ್ಲಾವಾರು ನೀಡುವುದು)

## ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೦ (೭೮೮) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚನ್ನರಾಯಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಬಡಾವಣೆಗಳಲ್ಲಿ ಒಳಚರಂಡಿ ವ್ಯವಸ್ಥೆ ಮತ್ತು ರಸ್ತೆಗಳು ಇಲ್ಲದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಬಡಾವಣೆಗಳಲ್ಲಿ ಈ ಸಮಸ್ಯೆಗಳು ಕಂಡುಬಂದಿವೆ ಮತ್ತು ಈ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮುಗಳೇನು ; (ವಾರ್ಡ್‌ವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಚನ್ನರಾಯಪಟ್ಟಣ ಪುರಸಭೆ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ವಿವರ ನೀಡುವುದು)

(ಈ) ಚನ್ನರಾಯಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿ ಕಳೆದ ೨ ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳ ಒಟ್ಟು ಮೊತ್ತವೆಷ್ಟು ; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರ್‍ಯಾರು ? (ಕಾಮಗಾರಿವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಖನಿಜ ಸಂಪನ್ಮೂಲಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೧ (೮೩೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆ ವ್ಯಾಪ್ತಿಯಡಿ ಬರುವ ಖನಿಜಗಳು ಮತ್ತು ಉಪಖನಿಜಗಳು ಯಾವುವು ; ಇವುಗಳು ರಾಜ್ಯದಲ್ಲಿ ದೊರೆಯುವ ಸ್ಥಳಗಳಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ವ್ಯಾಪ್ತಿಯಡಿ ಬರುವ ಉದ್ಯಮ/ಘಟಕಗಳು/ವಿಧಗಳು ಯಾವುವು ; ಈ ಇಲಾಖೆಯು ಯಾವ ಯಾವ ಉದ್ಯಮ/ಘಟಕಗಳಿಗೆ ಲೈಸನ್ಸ್ ನೀಡಬಹುದು ; (ಜಿಲ್ಲಾವಾರು ಮಾಹಿತಿ ಕೊಡುವುದು)

(ಇ) ಇಲಾಖೆಯು ಲೈಸನ್ಸ್ ನೀಡುವ ಮುನ್ನ ಕೈಗೊಂಡಿರುವ ಸುರಕ್ಷತಾ ಕ್ರಮಗಳು ಯಾವುವು ;

(ಈ) ಇತ್ತೀಚೆಗೆ ಶಿವಮೊಗ್ಗ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ನಡೆದ ಘಟನೆಗಳಿಗೆ ಕಾರಣಗಳೇನು ; ಇದರ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ; ಈ ಘಟನೆಯಲ್ಲಿ ಮೃತರಾದ ವ್ಯಕ್ತಿಗಳಿಗೆ ಸರ್ಕಾರ ಎಷ್ಟು ಮೊತ್ತದ ಪರಿಹಾರ ಘೋಷಿಸಿದೆ ?

## ರಾಜ್ಯದ ಸಣ್ಣ ಕೈಗಾರಿಕೆಗಳ ಮತ್ತು ಘಟಕಗಳ ವಿಧಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೨ (೮೩೪) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕೆ ಎಂದರೇನು ; ಇದರ ವ್ಯಾಪ್ತಿಯಡಿಯಲ್ಲಿ ಬರುವ ಕೈಗಾರಿಕೆಗಳು/ಕೈಗಾರಿಕೆಗಳ ವಿಧಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ರಾಜ್ಯದಲ್ಲಿ ಸ್ಥಾಪಿತಗೊಂಡಿರುವ ಸಣ್ಣ ಕೈಗಾರಿಕೆಗಳು ಎಷ್ಟು ; ಅವು ಯಾವುವು ; (ಕೈಗಾರಿಕೆ ಘಟಕಗಳ ಹೆಸರಿನೊಂದಿಗೆ, ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಹಾಲಿ ಜಾರಿಯಲ್ಲಿರುವ ಸಣ್ಣ ಕೈಗಾರಿಕಾ ನೀತಿ ಏನು ? (ಪ್ರತಿಯನ್ನು ಒದಗಿಸುವುದು)

## ನಗರ ನೀರು ಸರಬರಾಜು ಒಳಚರಂಡಿ ಮಂಡಳಿಯ ಆಸ್ತಿ ಹೊಣೆಗಾರಿಕೆಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೩ (೮೩೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಯಾವಾಗ ಎಲ್ಲಿ ಪ್ರಾರಂಭಿಸಲಾಯಿತು ; ಇದರ ಇತಿಹಾಸ ಹಾಗೂ ಧ್ಯೇಯೋದ್ದೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಆಸ್ತಿಗಳು ಯಾವುವು ಹಾಗೂ ಅವು ಎಲ್ಲಿವೆ ; ಅವುಗಳ ಇಂದಿನ ಮೌಲ್ಯವೇನು ; ಇದರ ಮೇಲೆ ಸರ್ಕಾರದ ಹೊಣೆಗಾರಿಕೆ ಎಷ್ಟಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸದರಿ ಮಂಡಳಿಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಯಾವ ಯಾವ ಯೋಜನೆಗಳಡಿ ಎಷ್ಟು ಹಣ ಬಿಡುಗಡೆಯಾಗಿದೆ ; ಇದರಲ್ಲಿ ಸಹಾಯ ಧನವೆಷ್ಟು; (ವಿವರವಾದ ಮಾಹಿತಿ ನೀಡುವುದು)

(ಈ) ಈ ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅನುಮೋದನೆಗೊಂಡ ಹುದ್ದೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಭರ್ತಿ ಆಗಿರುವ ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು ? (ವಿವರವಾಗಿ ಹುದ್ದೆಯ ಪದನಾಮ, ವೇತನ ಶ್ರೇಣಿ, ವಿದ್ಯಾರ್ಹತೆ, ಆಯ್ಕೆ ಮಾದರಿ, ಇತರೆಗಳೊಂದಿಗೆ ಹುದ್ದೆವಾರು ವಿವರವಾದ ಮಾಹಿತಿ ನೀಡುವುದು)

## ಕಾನೂನು ಮಾಪನ ಶಾಸ್ತ್ರ ಇಲಾಖೆಯ ವೃಂದ ನೇಮಕಾತಿ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೪ (೮೩೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾನೂನು ಮಾಪನಾ ಶಾಸ್ತ್ರ ಇಲಾಖೆಯನ್ನು ಯಾವಾಗ ಸ್ಥಾಪಿಸಲಾಯಿತು ; ಇದರ ಧ್ಯೇಯೋದ್ದೇಶಗಳೇನು ; ಕರ್ತವ್ಯಗಳೇನು; ಇದರ ಕೇಂದ್ರ ಕಛೇರಿ ಎಲ್ಲಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಈ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ಏನಿವೆ; ಒಟ್ಟಾರೆ ಇರುವ ಹುದ್ದೆಗಳು ಎಷ್ಟು ; ಹಾಲಿ ಭರ್ತಿಯಾಗಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು; (ಸಿ & ಆರ್ ಪ್ರತಿಯೊಂದಿಗೆ ವಿವರವಾದ ಮಾಹಿತಿ ಒದಗಿಸುವುದು)

(ಇ) ಕಳೆದ ೩ ವರ್ಷಗಳಲ್ಲಿ ಇಲಾಖೆಯು ಎಷ್ಟು ಮೊಕದ್ದಮೆಗಳನ್ನು ದಾಖಲು ಮಾಡಲಾಗಿದೆ ; ಅವುಗಳಲ್ಲಿ ಎಷ್ಟು ಮೊಕದ್ದಮೆಗಳು ಬಗೆಹರಿದಿವೆ ; ಎಷ್ಟು ಬಾಕಿ ಇವೆ ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಈ) ಕಾನೂನು ಮಾಪನ ಶಾಸ್ತ್ರ ಇಲಾಖೆಯನ್ನು ಸಬಲೀಕರಣಗೊಳಿಸಿ, ಜನರಿಗೆ ಅನುಕೂಲ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಸಹಕಾರ ಸಂಘದ ಕಾಯ್ದೆಯಡಿ ನೊಂದಣಿಯಾದ ಗೃಹ ನಿರ್ಮಾಣ ಸಂಘಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೫ (೮೫೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಸಂಘದ ಕಾಯ್ದೆಯಡಿ ನೋಂದಣಿಯಾದ ಗೃಹ ನಿರ್ಮಾಣ ಸಂಘಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಗೃಹ ನಿರ್ಮಾಣ ಸಂಘಗಳ ನೋಂದಣಿಗೆ ಹಾಗೂ ಕಾರ್ಯನಿರ್ವಹಣೆಗೆ ಇರುವ ನಿಯಮಗಳೇನು ; (ವಿವರ ನೀಡುವುದು)

(ಇ) ಸದರಿ ಗೃಹ ನಿರ್ಮಾಣ ಸಹಕಾರ ಸಂಘಗಳಲ್ಲಿ ಎಷ್ಟು ಸಂಘಗಳು ಹಾಲಿ ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಸಂಘಗಳಲ್ಲಿ ಕಾರ್ಯನಿರ್ವಹಣೆಯಾಗುತ್ತಿಲ್ಲ ;

(ಈ) ಒಟ್ಟು ಸಹಕಾರ ಸಂಘಗಳಲ್ಲಿ ಎಷ್ಟು ಸಂಘಗಳಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಅವ್ಯವಹಾರ ಎಸಗಿದ ಸಹಕಾರ ಸಂಘಗಳ ಸಂಖ್ಯೆ ಎಷ್ಟು ಮತ್ತು ಸಂಘ ಹಾಗೂ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಸರ್ಕಾರ ಏನು ಕ್ರಮ ಜರುಗಿಸಿದೆ ?

## ಅನಧಿಕೃತವಾಗಿ ಬಿಪಿಎಲ್ ಕಾರ್ಡ್ ಹೊಂದಿರುವವರ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೬ (೮೫೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನಧಿಕೃತವಾಗಿ ಬಿಪಿಎಲ್ ಕಾರ್ಡ್ ಪಡೆದು ಸರ್ಕಾರದ ಸೌಲಭ್ಯವನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಎಷ್ಟು ನಕಲಿ ಬಿಪಿಎಲ್ ಕಾರ್ಡುಗಳನ್ನು ಈವರೆಗೆ ರದ್ದುಪಡಿಸಲಾಗಿದೆ ;

(ಇ) ಈ ರೀತಿ ಸರ್ಕಾರದ ಸೌಲಭ್ಯ ದುರುಪಯೋಗಪಡಿಸಿಕೊಂಡವರ ಮೇಲೆ ಕ್ರಿಮಿನಲ್ ಮೊಕದ್ದಮೆ ಹೂಡಲಾಗಿದೆಯೇ ;

(ಈ) ಬೆಳಗಾವಿ ಜಿಲ್ಲೆಯಲ್ಲಿ ಪತ್ತೆ ಹಚ್ಚಲಾಗಿರುವ ಅನರ್ಹ ಬಿಪಿಎಲ್ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಉಜ್ವಲ ಯೋಜನೆಯ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೭ (೮೫೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ಬಡವರಿಗೆ ವಿತರಿಸಲಾಗಿರುವ ಉಜ್ವಲ ಯೋಜನೆಗೆ ಅರ್ಹ ಫಲಾನುಭವಿಗಳನ್ನು ಗುರುತಿಸಲು ಇರುವ ಮಾನದಂಡಗಳೇನು ;

(ಆ) ಈ ಯೋಜನೆಗೆ ಒಳಪಟ್ಟ ಫಲಾನುಭವಿಗಳ ಸಂಖ್ಯೆ ಎಷ್ಟು ; ಹಾಗೂ ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಇರುವ ಉಜ್ವಲ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಉಜ್ವಲ ಯೋಜನೆಯಿಂದ ಸರ್ಕಾರಕ್ಕೆ ಆಗಿರುವ ವಾರ್ಷಿಕ ಹೊರೆ ಎಷ್ಟು ?

## ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳಾಗಿ ಮತ್ತು ಪುರಸಭೆಗಳನ್ನು ನಗರಸಭೆಗಳಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೬೮೮ (೮೬೦) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ, ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ ;

(ಆ) ಗ್ರಾಮ ಸಭೆಗಳನ್ನು ಪುರಸಭೆಗಳನ್ನಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು ;

(ಇ) ಬೆಳಗಾವಿ ಜಿಲ್ಲೆಯಲ್ಲಿನ ಎಷ್ಟು ಹಾಗೂ ಯಾವ ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳಿವೆ ?

## ಕೊಡಗು ಜಿಲ್ಲೆಯಲ್ಲಿ ಪಡಿತರ ಚೀಟಿಗಳ ವಿಲೇವಾರಿ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):-**

೬೮೯ (೮೨೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ದಿನದವರೆಗೆ ಎಷ್ಟು ಪಡಿತರ ಚೀಟಿ ಚಲಾವಣೆಯಲ್ಲಿವೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಪ್ರಸಕ್ತ ವರ್ಷದಲ್ಲಿ ಯವುದಾದರೂ ಪಡಿತರ ಚೀಟಿಯನ್ನು ರದ್ದುಪಡಿಸಲಾಗಿದೆಯೇ ; ರದ್ದುಪಡಿಸಿದ್ದಲ್ಲಿ, ಕಾರಣಗಳೇನು ;

(ಇ) ಜಿಲ್ಲೆಯಲ್ಲಿ ಹೊಸದಾಗಿ ಪಡಿತರ ಚೀಟಿ ವಿತರಣೆ ಮಾಡುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳಲ್ಲಿ ಬಾಕಿ ಇರುವ ಅರ್ಜಿಗಳೆಷ್ಟು; ಈ ರೀತಿ ಬಾಕಿ ಇರಲು ಕಾರಣಗಳೇನು ;

(ಈ) ಬಾಕಿ ಇರುವ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ವಿಲೇವಾರಿ ಮಾಡಲಾಗುವುದು ?

## ಜಿಲೆಟಿನ ಸ್ಫೋಟಕದ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೬೯೦ (೮೪೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕಿನ ನಾಗವಲ್ಲಿಯ ಗಣಿಯಲ್ಲಿ ಜಿಲೆಟಿನ್ ಸ್ಫೋಟದಿಂದ ಅನಾಹುತ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ದುರಂತದಲ್ಲಿ ಆಗಿರುವ ಪ್ರಾಣಹಾನಿ ಹಾಗೂ ಇತರೆ ನಷ್ಟ ಎಷ್ಟು; (ವಿವರ ನೀಡುವುದು)

(ಆ) ಈ ದುರಂತಕ್ಕೆ ಕಾರಣ ಏನು ;

(ಇ) ಇಂತಹ ಅನಾಹುತಗಳು ಮರುಕಳಿಸದಂತೆ ಸರ್ಕಾರ ತೆಗೆದುಕೊಂಡ ಮುನ್ನೆಚ್ಚರಿಕೆಯ ಕ್ರಮಗಳೇನು ?

## ಕಲ್ಲು ಪುಡಿ ಕ್ರಷರ್‌ಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೧ (೮೪೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕಲ್ಲು ಪುಡಿ ಮಾಡುವ ಕ್ರಷರ್‌ಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಅಧಿಕೃತ ಮತ್ತು ಅನಧಿಕೃತ ಕಲ್ಲು ಪುಡಿ ಮಾಡುವ ಘಟಕಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮೇಲ್ಕಂಡ ಕ್ರಷರ್‌ಗಳಿಂದ ಸರ್ಕಾರಕ್ಕೆ ಬಂದಿರುವ ಆದಾಯ ಎಷ್ಟು ; (ಘಟಕವಾರು ವಿವರ ನೀಡುವುದು)

(ಇ) ಈ ಕ್ರಷರ್‌ಗಳಿಂದ ಸರ್ಕಾರಕ್ಕೆ ಬರಬೇಕಾಗಿರುವ ಬಾಕಿ ರಾಜಸ್ವ ಧನ ಎಷ್ಟು ; (ಕಳೆದ ೫ ವರ್ಷಗಳ ಬಾಕಿ ಇರುವ ವಿವರ ನೀಡುವುದು)

(ಈ) ಇದುವರೆವಿಗೂ ಈ ಬಾಕಿ ಹಣವನ್ನು ವಸೂಲಿ ಮಾಡದೇ ಇರಲು ಕಾರಣ ಏನು ? (ಭಾಗಿಯಾಗಿರುವ ಅಧಿಕಾರಿಗಳ ವಿವರ ನೀಡುವುದು)

## ಕೆ.ಐ.ಎ.ಡಿ.ಬಿ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೨ (೮೫೦) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಐ.ಎ.ಡಿ.ಬಿ. ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ;

(ಆ) ಇದುವರೆವಿಗೂ ಕೆ.ಐ.ಎ.ಡಿ.ಬಿ ಯಿಂದ ಸರ್ಕಾರವು ಕೈಗಾರಿಕೆಗಳಿಗೋಸ್ಕರ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೫ ವರ್ಷಗಳಿಂದ ಕೆ.ಐ.ಎ.ಡಿ.ಬಿ. ವತಿಯಿಂದ ಮೇಲ್ಕಂಡ ಕೈಗಾರಿಕಾ ಪ್ರದೇಶಗಳನ್ನು ನಿರ್ಮಿಸಲು/ಅಭಿವೃದ್ಧಿ ಪಡಿಸಲು ವ್ಯಯಿಸಲಾದ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ಕೈಗಾರಿಕೆಗಳನ್ನು ಸ್ಥಾಪಿಸಲು ನಿವೇಶನ ಹಂಚಿಕೆ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇವಾರಿ ಮಾಡಲಾದ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇವಾರಿ ಆಗದಿರುವ ಅರ್ಜಿಗಳ ಸಂಖ್ಯೆ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಉ) ನಿವೇಶನ ಹಂಚಿಕೆಯಿಂದ ಸಂಗ್ರಹಿಸಲಾದ ಮೊತ್ತ ಎಷ್ಟು?

## ಸ್ಮಾರ್ಟ್‌ಸಿಟಿ ಯೋಜನೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೩ (೮೪೯) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಸ್ಮಾರ್ಟ್‌ಸಿಟಿ ಯೋಜನೆಗೆ ಕೈಗೆತ್ತಿಕೊಂಡಿರುವ ನಗರ/ನಗರ ಪಾಲಿಕೆಗಳು ಯಾವುವು;

(ಆ) ಕಳೆದ ಮೂರು ವರ್ಷಗಳಲ್ಲಿ ಸ್ಮಾರ್ಟ್‌ಸಿಟಿಗಳಿಗೆ ಮೇಲ್ಕಂಡ ನಗರ/ನಗರ ಪಾಲಿಕೆಗಳಿಗೆ ಬಿಡುಗಡೆ ಮಾಡಲಾದ ಮೊತ್ತ ಎಷ್ಟು;

(ಇ) ದಾವಣಗೆರೆ ಮತ್ತು ತುಮಕೂರು ಮಹಾನಗರ ಪಾಲಿಕೆಗಳಲ್ಲಿ ಮೇಲ್ಕಂಡ ಯೋಜನೆಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು; ಇದಕ್ಕಾಗಿ ಖರ್ಚು ಮಾಡಿರುವ ಅನುದಾನ ಎಷ್ಟು; (ಕಾಮಗಾರಿವಾರು ವಿವರ ನೀಡುವುದು)

## ಸಣ್ಣ ಕೈಗಾರಿಕೆಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೪ (೮೪೮) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕೆ ನಿವೇಶನಗಳನ್ವಯ ಹೊಸದಾಗಿ ಸ್ಥಾಪಿಸಲ್ಪಟ್ಟ ಉದ್ಯಮಗಳಿಗೆ ಮಂಜೂರು ಮಾಡಲಾದ ಸಹಾಯಧನದ ಮೊತ್ತ ಎಷ್ಟು; ಬಿಡುಗಡೆಯಾದ ಸಹಾಯಧನದ ವಿವರಗಳನ್ನು ನೀಡುವುದು ;

(ಆ) ಕೊವಿಡ್–೧೯ ನಿಂದಾಗಿ ಸಂಕಷ್ಟಕ್ಕೆ ಒಳಗಾದ ಎಂ.ಎಸ್.ಎಂ.ಐ. ಉದ್ದಿಮೆಗಳ ರೋಗಗ್ರಸ್ಥ ಕೈಗಾರಿಕೆಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; ಪ್ರಯೋಜನ ಪಡೆದ ಕೈಗಾರಿಕೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೫ (೮೦೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಕ್ರಮ ಗಣಿಗಾರಿಕೆಯನ್ನು ಸಕ್ರಮ ಮಾಡಲು ಹೊರಟಿರುವ ಸರ್ಕಾರ ಸಕ್ರಮಕ್ಕೆ ಹಾಕುತ್ತಿರುವ ಮಾನದಂಡಗಳು ಯಾವುವು ;

(ಆ) ಈಗಾಗಲೇ ಲೈಸೆನ್ಸ್ ಇಲ್ಲದೆ ಅಕ್ರಮವಾಗಿ ಗಣಿಗಾರಿಕೆ ಮಾಡಿರುವ ಹಾಗೂ ಮಾಡುತ್ತಿರುವವರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ;

(ಇ) ಶಿವಮೊಗ್ಗ ಸೇರಿದಂತೆ ಚಿಕ್ಕಬಳ್ಳಾಪುರದಲ್ಲಿ ನಡೆದ ಭಾರಿ ಸ್ಫೋಟದ ಹಿನ್ನಲೆಯಲ್ಲಿ ಆ ಎರಡು ಕ್ರಷರ್ ಮಾಲೀಕರು ಗಣಿಗಾರಿಕೆ ಲೈಸೆನ್ಸ್ ಹೊಂದಿದ್ದಾರೆಯೇ ;

(ಈ) ಹೊಂದಿದ್ದಲ್ಲಿ, ಅವರ ಲೈಸೆನ್ಸ್ ಅನ್ನು ರದ್ದುಗೊಳಿಸುವ ಯೋಚನೆ ಸರ್ಕಾರದ ಗಮನದಲ್ಲಿದೆಯೇ ;

(ಉ) ಎರಡೂ ಸ್ಫೋಟಗಳಿಂದ ಜೀವ ಹಾನಿಯಾಗಿದ್ದು ಇದಕ್ಕೆ ಇಲಾಖೆಯಿಂದ ಪರಿಹಾರ ನೀಡಲಾಗಿದೆಯೇ ? (ಸಂಪೂರ್ಣ ಮಾಹಿತಿಯನ್ನು ವಿವರಣೆಗಳೊಂದಿಗೆ ನೀಡುವುದು)

## ಕೋವಿಡ್ ಸಂದರ್ಭದಲ್ಲಿ ಹಂಚಿಕೆಯಾಗದೇ ಇರುವ ರೇಷನ್ ಕಿಟ್ಟುಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೬ (೮೦೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ಸಂದರ್ಭದಲ್ಲಿ ಹಂಚಿಕೆ ಆಗದೆ ಉಳಿದಿರುವ ರೇಷನ್ ಕಿಟ್ಟುಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಯಲಹಂಕದಲ್ಲಿ ೭೫೦ ರೇಷನ್ ಕಿಟ್ಟುಗಳು ಕೊಳೆತ ಸ್ಥಿತಿಯಲ್ಲಿ ಸಿಕ್ಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ವಿಷಯದ ಕುರಿತು ಅಲ್ಲಿನ ಅಧಿಕಾರಿಗಳ ವಿರುದ್ಧ ಜರುಗಿಸಲಾದ ಕ್ರಮ ಏನು ;

(ಈ) ಈ ರೀತಿ ಇನ್ನ ಎಷ್ಟು ಕಡೆಗಳಲ್ಲಿ ರೇಷನ್ ಕಿಟ್ಟುಗಳು ಉಪಯೋಗಿಸದೆ ಹಾಗೆ ಉಳಿದಿವೆ, ಮತ್ತು ಅದನ್ನು ಇಲಾಖೆ ಯಾವ ರೀತಿಯಲ್ಲಿ ಲೆಕ್ಕ ಮತ್ತು ಮಾಹಿತಿ ಕಲೆ ಹಾಕುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ಮಾಹಿತಿ ಬಂದ ನಂತರ ಇಲಾಖೆಯ ಮುಂದಿನ ಕ್ರಮ ಏನು ? (ವಿವರ ನೀಡುವುದು)

## ಸಣ್ಣ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೭ (೮೦೮) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊರೋನದಿಂದ ಅತಂತ್ರವಾಗಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಯಾವುದಾದರೂ ಹೊಸ ಯೋಜನೆ ರೂಪುಗೊಂಡಿದೆಯೇ ; ಹಾಗಿದ್ದಲ್ಲಿ ಯೋಜನೆಯ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈಗಾಗಲೇ ಸಣ್ಣ ಕೈಗಾರಿಕೆ ಉತ್ತೇಜಿಸಲು ಸರ್ಕಾರದಿಂದ ಬಿಡುಗಡೆ ಅಗಿರುವ ಯೋಜನೆ ಮತ್ತು ಅದರ ಅನುದಾನದ ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಇ) ಸಣ್ಣ ಕೈಗಾರಿಕೆ ಉದ್ಯಮಗಳಿಗೆ ಸಾಲ ಸೌಲಭ್ಯ ಇದೆಯೇ ;

(ಈ) ಇದ್ದಲ್ಲಿ, ೨೦೨೦-೨೧ನೇ ಸಾಲಿನಲ್ಲಿ ಎಷ್ಟು ಮೊತ್ತದ ಸಾಲಗಳನ್ನು ಯಾವ ಯಾವ ಭಾಗಗಳಲ್ಲಿ ನೀಡಲಾಗಿದೆ ?

## ಪ್ರಧಾನ ಮಂತ್ರಿ "ಉಜ್ವಲ ಯೋಜನೆ" ಯಡಿ ಗ್ಯಾಸ್ ಸಂಪರ್ಕ ನೀಡುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೯೮ (೮೦೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಉಜ್ವಲ ಯೋಜನೆ ಅಡಿಯಲ್ಲಿ ಎಷ್ಟು ಕುಟುಂಬಗಳಿಗೆ ಗ್ಯಾಸ್ ಸಂಪರ್ಕ ನೀಡಲಾಗಿದೆ ;

(ಆ) ಈ ತನಕ ಎಷ್ಟು ಬಡ ಕುಟುಂಬಗಳಿಗೆ ಸಬ್ಸಿಡಿ ದೊರಕಿದೆ ಹಾಗೂ ಸಬ್ಸಿಡಿ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ಕಳೆದ ವರ್ಷದಿಂದ ಸಬ್ಸಿಡಿ ಹಣ ಖಾತೆಗೆ ಬರದೆ ಇರುವ ಕುಟುಂಬಗಳು ಎಷ್ಟು ; ಈ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ಯಾವ ರೀತಿ ಪರಿಶೀಲಿಸಿ ಕುಟುಂಬಗಳಿಗೆ ನೆರವು ನೀಡಲಾಗಿದೆ? (ಸಬ್ಸಿಡಿ ನಿಲ್ಲಲು ಸೂಕ್ತ ಕಾರಣ ನೀಡುವುದು)

## ರಾಜ್ಯದಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯ (೮೦೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ನಿಷ್ಕ್ರಿಯೆಗೊಂಡಿರುವ ಸಹಕಾರ ಸಂಘಗಳು ಎಷ್ಟು ಗೃಹ ನಿರ್ಮಾಣ ಸಂಘಗಳು ಕ್ರಿಯಾಶೀಲವಾಗಿವೆ ; ಎಷ್ಟು ಸಹಕಾರ ಸಂಘಗಳನ್ನು ಪ್ರಾರಂಭಿಸಿ ನಿಗಧಿತ ಮೊತ್ತವನ್ನು ಪಡೆದುಕೊಂಡಿದ್ದರೂ ೧೦–೧೫ ವರ್ಷಗಳಿಂದಲೂ ನಿವೇಶನ ನೀಡದೆ ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಗೃಹ ನಿರ್ಮಾಣ ಸಂಘಗಳ ವಿರುದ್ಧ ದೂರು ದಾಖಲಿಸಿಕೊಂಡು, ಯಾವುದಾದರೂ ಕಾನೂನು ಕ್ರಮಗಳನ್ನು ಜರುಗಿಸಲಾಗಿದೆ ; ಹಾಗಿದ್ದಲ್ಲಿ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ನಿಷ್ಕ್ರಿಯೆಗೊಂಡಿರುವ ಗೃಹ ನಿರ್ಮಾಣ ಸಹಕಾರ ಸಂಘಗಳು ತಮ್ಮ ಸದಸ್ಯರುಗಳಿಂದ ಪಡೆದುಕೊಂಡಿರುವ ಹಣದ ಮೊತ್ತ ಮತ್ತು ಬಡ ಮಧ್ಯಮ ವರ್ಗದ ನಿವೇಶನಾಕಾಂಕ್ಷಿಗಳಿಗೆ ವಂಚನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

# ರಾಜ್ಯದಿಂದ FCI ದಿಂದ ಖರೀದಿ ಮತ್ತು ರಾಜ್ಯಕ್ಕೆ ನೀಡುವ ಆಹಾರ ಧಾನ್ಯಗಳ ಕುರಿತು

**ಶ್ರೀ ಕೆ. ಪ್ರತಾಪ್ರಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೦ (೮೭೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೫ ವರ್ಷಗಳಲ್ಲಿ ಕರ್ನಾಟಕದ ಎ.ಪಿ.ಎಂ.ಸಿ. ಮುಖಾಂತರ ಫುಡ್ ಕಾರ್ಪೋರೇಷನ್ ಆಫ್ ಇಂಡಿಯಾ (FCI) ಮೂಲಕ ಕೇಂದ್ರ ಸರ್ಕಾರವು ಖರೀದಿಸಿದ ಪ್ರಮಾಣ ಎಷ್ಟು ; (ಆಹಾರ ಧಾನ್ಯಗಳ ಐಟಂವಾರು, ವರ್ಷವಾರು, ಖರೀದಿವಾರು ತಖ್ತೆ ಒದಗಿಸುವುದು ಮತ್ತು ಫುಡ್ ಕಾರ್ಪೋರೇಷನ್ ಆಫ್ ಇಂಡಿಯಾ (FCI) ಮೂಲಕ ಕೇಂದ್ರ ಸರ್ಕಾರವು ಕರ್ನಾಟಕಕ್ಕೆ ಪಡಿತರ ವಿತರಣೆಗಾಗಿ ಮಂಜೂರು ಮಾಡಿದ ಆಹಾರ ಧಾನ್ಯಗಳ ಐಟಂವಾರು, ಘಟಕವಾರು, ವರ್ಷವಾರು, ಖರೀದಿವಾರು ತಖ್ತೆ ಒದಗಿಸುವುದು) ಈ ಆಹಾರ ಧಾನ್ಯಗಳನ್ನು ಎಲ್ಲಿ ಶೇಖರಣೆ ಮಾಡಲಾಗಿದೆ ; ಇದಕ್ಕೆ ಗುರಿ ನಿಗದಿಪಡಿಸಲಾಗಿದೆಯೇ ;

(ಆ) ಖಾಸಗಿ ಸಂಸ್ಥೆಗಳಿಗೆ ಆಹಾರ ಧಾನ್ಯ ಸಂಗ್ರಹಿಸುವ ಅಧಿಕಾರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಖಾಸಗಿ ಸಂಸ್ಥೆಗಳಿಗೆ ಪರವಾನಿಗೆ ನೀಡಲಾಗಿದೆ ; ಅವು ಯಾವುವು ; (FCI) ಗೆ ಹೊರತಾಗಿ ಖರೀದಿ ಮಾಡಿ ಪಡಿತರ ವ್ಯವಸ್ಥೆಗೆ ವಿತರಣೆ ಮಾಡಿದ ಆಹಾರ ಧಾನ್ಯಗಳ ಐಟಂವಾರು, ವರ್ಷವಾರು, ಖರೀದಿವಾರು ತಖ್ತೆ ಒದಗಿಸುವುದು ;

(ಇ) ಖಾಸಗಿಯವರಿಗೆ ಪರವಾನಿಗೆ ನೀಡಿದಲ್ಲಿ ಆಹಾರ ಧಾನ್ಯಗಳ ದರದ ಮೇಲಿನ ನಿಯಂತ್ರಣ ಸರ್ಕಾರದ ಕೈತಪ್ಪಿ ಹೋಗುವುದಿಲ್ಲವೇ ; ಖಾಸಗಿಯವರು ದುರ್ಬಳಕೆ ಮಾಡಿಕೊಂಡು ಆಹಾರ ಧಾನ್ಯಗಳ ಕೃತಕ ಅಭಾವ ಸೃಷ್ಟಿಸಿ ಬೆಲೆಗಳನ್ನು ಏರಿಸುವ ಅಪಾಯದ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ; ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳಾವುವು ?

## ಉಡುಪಿ ನಗರಕ್ಕೆ ಕುಡಿಯುವ ನೀರು ಪೂರೈಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೧ (೮೭೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ನಗರಕ್ಕೆ ವಾರಾಹಿಯಿಂದ ಕುಡಿಯುವ ನೀರನ್ನು ಪೂರೈಸುವ ಯೋಜನೆಯ ಒಟ್ಟು ಅಂದಾಜು ವೆಚ್ಚವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; ಈ ಯೋಜನೆಯು ಯಾವ ಯಾವ ಕಾಮಗಾರಿಗಳನ್ನು ಒಳಗೊಂಡಿರುತ್ತದೆ ; ಇವುಗಳ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆಯೇ ; (ಟೆಂಡರ್‌ನ್ನು ಪಡೆದ ಗುತ್ತಿಗೆದಾರರ ಹೆಸರು ಮತ್ತು ವಿಳಾಸವನ್ನು ನೀಡುವುದು)

(ಆ) ಈ ಯೋಜನೆಯಲ್ಲಿ ಟೆಂಡರ್ ನಿಯಮಾವಳಿಗೆ ಅನುಗುಣವಾಗಿ ಕಾಮಗಾರಿ ನಿರ್ವಹಿಸದೇ ಇರುವುದು ಹಾಗೂ ಕಳಪೆ ಗುಣಮಟ್ಟದ ಕಾಮಗಾರಿಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಮಗಾರಿಯ ಗುಣಮಟ್ಟವನ್ನು ಕಾಪಾಡುವ ದೃಷ್ಟಿಯಿಂದ ಇಲಾಖೆಯಿಂದ ಕೈಗೊಂಡ ಕ್ರಮಗಳು ಯಾವುವು ; ಕಾಮಗಾರಿ ಗುಣಮಟ್ಟ ನಿಯಂತ್ರಣಕ್ಕಾಗಿ ನಿಯೋಜಿಸಿದ ಅಧಿಕಾರಿಯ ಹೆಸರು ಮತ್ತು ಪದನಾಮ ಒದಗಿಸುವುದು ;

(ಇ) ಸಬ್ ಲೀಸ್ ನೀಡಬಾರದು ಎಂಬ ನಿಬಂಧನೆ ಇದ್ದರೂ ಸಬ್ ಲೀಸ್ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳಾವುವು ; ಈ ಯೋಜನೆಯನ್ನು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ನೀಡಿದ ಕಾಲಮಿತಿ ಯಾವುದು ; ನಿಗದಿತ ಕಾಲದೊಳಗೆ ಪೂರ್ಣಗೊಳಿಸಲು ಇಲಾಖೆಯ ಕ್ರಮಗಳು ಯಾವುವು ?

## ಶಿವಮೊಗ್ಗ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕಟ್ಟಡ ಕಲ್ಲು ಗಣಿ, ಕ್ರಶರ್ ಘಟಕಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೨ (೮೭೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿರುವ ಕಟ್ಟಡ ಕಲ್ಲು ಗಣಿ (ಕ್ವಾರಿ), ಕಲ್ಲುಪುಡಿ (ಕ್ರಶರ್) ಘಟಕ, ಎಮ್ ಸ್ಯಾಂಡ್ (M Sand) ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಘಟಕಗಳ ಹೆಸರು, ವಿಳಾಸ ಒದಗಿಸುವುದು)

(ಆ) ಈ ಘಟಕಗಳು ಹೊಂದಿರುವ ಪರವಾನಿಗೆಯ ಅವಧಿ ಹಾಗೂ ನಿರಾಕ್ಷೇಪಣ ಪತ್ರದ ಅವಧಿಗಳು ಯಾವುವು ; ಈ ಘಟಕಗಳಿಗೆ ನಿರಾಕ್ಷೇಪಣಾ ಪತ್ರವನ್ನು ನೀಡಿದ ಇಲಾಖೆ ಮತ್ತು ನಿರಾಕ್ಷೇಪಣೆಯನ್ನು ನೀಡಿದ ದಿನಾಂಕಗಳು ಯಾವುವು ; (ಸಂಸ್ಥೆ/ ಘಟಕವಾರು ಮಾಹಿತಿಯನ್ನು ಒದಗಿಸುವುದು)

(ಇ) ಈ ಘಟಕಗಳ ಮೇಲೆ ಈ ಹಿಂದೆ ಅಕ್ರಮ ಗಣಿಗಾರಿಕೆ ದೂರು ದಾಖಲಾಗಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳು ಯಾವುವು ? (ಪ್ರಕರಣವಾರು ಮತ್ತು ಘಟಕವಾರು ಮಾಹಿತಿಯನ್ನು ಒದಗಿಸುವುದು)

# ದಕ್ಷಿಣ ಕನ್ನಡ ಕೇಂದ್ರ ಸಹಕಾರಿ ಬ್ಯಾಂಕ್ ನಿ., ಮಂಗಳೂರು ೨೦೧೭-೧೮ ನೇ ಸಾಲಿನಲ್ಲಿ ಕೈಗೊಂಡ ನೇಮಕಾತಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೦೩ (೮೭೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ., ಮಂಗಳೂರು ಇವರು ೨೦೧೭-೧೮ ನೇ ಸಾಲಿನಲ್ಲಿ ಕೈಗೊಂಡ ನೇರ ನೇಮಕಾತಿ ಸಂದರ್ಭದಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆಗಾಗಿ ದುಬಾರಿ ಅರ್ಜಿ ಶುಲ್ಕ ವಿಧಿಸಿದ್ದು, ಇದರಿಂದ ಬಡ ಉದ್ಯೋಗಾಕಾಂಕ್ಷಿಗಳಿಗೆ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅರ್ಜಿ ಶುಲ್ಕ ನಿಗದಿಪಡಿಸುವ ಬಗ್ಗೆ ಸರ್ಕಾರದ ಮಾರ್ಗಸೂಚಿ ಯಾವುವು ; (ಮಾರ್ಗಸೂಚಿ ಪ್ರತಿ ಒದಗಿಸುವುದು)

(ಆ) ಎಫ್.ಸಿ.ಡಿ.ಸಿ.ಸಿ., ಬ್ಯಾಂಕ್, ಮಂಗಳೂರು ಇವರ ಕಾರ್ಯಕ್ಷೇತ್ರದ ಹೊರಗೆ ಇರುವ ಜಿಲ್ಲೆ ಹಾಗೂ ಹೊರ ರಾಜ್ಯಗಳ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಮಾರ್ಗಸೂಚಿ ಪ್ರಕಾರ ಅವಕಾಶ ಇದೆಯೇ ; ಅವಕಾಶ ಇದ್ದಲ್ಲಿ, ಸರ್ಕಾರದ ಮಾರ್ಗಸೂಚಿ/ಸುತ್ತೋಲೆ ಒದಗಿಸುವುದು ; ಇಲ್ಲವಾದಲ್ಲಿ, ನಿಯಮವನ್ನು ಉಲ್ಲಂಘಿಸಿ ನೇಮಕಾತಿ ಮಾಡಿಕೊಂಡಿರುವ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿರುವ ಹುದ್ದೆಗಳನ್ನು ಹಾಗೂ ಮಾಜಿ ಸೈನಿಕರಿಗೆ ಮೀಸಲಾಗಿರುವ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲು ನಿಯಮಾವಳಿ ಪ್ರಕಾರ ಅವಕಾಶ ಇದೆಯೇ ;

ಈ ರೀತಿ ಭರ್ತಿ ಮಾಡಿಕೊಳ್ಳಲು ಸರ್ಕಾರವು ಅನುಮತಿ ನೀಡಿದೆಯೇ ; ಈ ರೀತಿ ಮೀಸಲಾತಿ ನಿಯಮವನ್ನು ಉಲ್ಲಂಘಿಸಿ ನೇಮಕಾತಿ ಮಾಡಿಕೊಂಡಿರುವ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದೇ ?

## ರಾಜ್ಯದ ಕಟ್ಟಡ ಕಲ್ಲು ಗಣಿ, ಕ್ರಶರ್, ಎಮ್ ಸ್ಯಾಂಡ್ ಘಟಕಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೦೪ (೮೭೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಕಟ್ಟಡ ಕಲ್ಲು ಗಣಿ (ಕ್ವಾರಿ), ಕಲ್ಲು ಪುಡಿ (ಕ್ರಶರ್) ಘಟಕ, ಎಮ್ ಸ್ಯಾಂಡ್ (M Sand) ಘಟಕಗಳ ಸಂಖ್ಯೆ ಎಷ್ಟು; (ಜಿಲ್ಲೆ, ತಾಲ್ಲೂಕುವಾರು ಘಟಕಗಳ ಹೆಸರು, ವಿಳಾಸ ಒದಗಿಸುವುದು) ಪ್ರತಿ ವರ್ಷ ಘಟಕಗಳು ಅವುಗಳ ಉತ್ಪಾದನಾ ಪ್ರಮಾಣ ಎಷ್ಟು ;

(ಆ) ಈ ಘಟಕಗಳಿಗೆ ಅಗತ್ಯವಾದ ಕಚ್ಚಾ ಸಾಮಾಗ್ರಿಗಳು ಮತ್ತು ಮೂಲಭೂತ ಅವಶ್ಯಕತೆಗಳು ಯಾವುವು ; ಇವುಗಳ ಸಂಗ್ರಹಣೆ ಮತ್ತು ಪೂರೈಕೆಯ ಮೇಲೆ ಸರ್ಕಾರದ ನಿಯಂತ್ರಣವೇನು ; ಈ ಕುರಿತು ಸರ್ಕಾರದಿಂದ ಕೈಗೊಂಡ ಕ್ರಮಗಳು ಮತ್ತು ಸುತ್ತೋಲೆಯ ಆದೇಶದ ಪ್ರತಿಯನ್ನು ನೀಡುವುದು ;

(ಇ) ಕಳೆದ ೦೩ ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆ ಹಾಗೂ ಮಾರ್ಗ ಸೂಚಿ ಮೀರಿ ಕಚ್ಚಾ ಮಾಲುಗಳ ಸಂಗ್ರಹದ ಕುರಿತು ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು ಮತ್ತು ಈ ಗಣಿಗಾರಿಕೆ ಪ್ರದೇಶದಲ್ಲಿ ಸುರಕ್ಷತೆಯ ಕುರಿತು ಸರ್ಕಾರದಿಂದ ಹೊರಡಿಸಲಾದ ಮಾರ್ಗಸೂಚಿ ಸುತ್ತೋಲೆಯ ಪ್ರತಿಯನ್ನು ಒದಗಿಸುವುದು)

## ವಿಜಯಪುರ ನಗರದ  ರಸ್ತೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ) :–**

೭೦೫ (೮೦೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರದಲ್ಲಿ ರಸ್ತೆಗಳು ಹಾಳಾಗಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ವಿಜಯಪುರ ನಗರದಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲೆಟಿನ್ ಸ್ಫೋಟದಿಂದ ಕಾರ್ಮಿಕರು ಅಸುನೀಗಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ) :–**

೭೦೬ (೮೧೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕಿನ ಹಿರೇನಾಗವಲ್ಲಿ ಗ್ರಾಮದಲ್ಲಿ ಜಿಲೆಟಿನ್ ಸ್ಫೋಟದಿಂದ ಆರುಮಂದಿ ಅಮಾಯಕ ಕಾರ್ಮಿಕರು ಅಸುನೀಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲೆಟಿನ್ ಕಡ್ಡಿಯನ್ನು ಸಂಗ್ರಹಿಸಿಡಲು ಇರುವ ಮಾನಂಡಗಳೇನು ;

(ಇ) ಪದೇ ಪದೇ ಈ ರೀತಿಯ ಸ್ಫೋಟಕಗಳು ನಡೆಯುತ್ತಿರುವುದು ಅನಾಹುತಕಾರಿಯಾಗಿದ್ದು, ತಪ್ಪತಸ್ಥರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಿ.ಪಿ.ಎಲ್ ಕಾರ್ಡ್‌ದಾರರ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ) :–**

೭೦೭ (೮೧೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬಿ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು ;

(ಆ) ಬಿ.ಪಿ.ಎಲ್ ಕಾರ್ಡ್ ಪಡೆಯಲು ಇರುವ ಮಾನದಂಡಗಳೇನು ;

(ಇ) ಸರ್ಕಾರವು ಪ್ರಸ್ತುತ ಚಾಲ್ತಿಯಲ್ಲಿರುವ ಯಾವ ಯಾವ ಮಾನದಂಡಗಳನ್ನು ಬದಲಿಸಲಾಗುತ್ತಿದೆ ? (ವಿವರ ಒದಗಿಸುವುದು)

## ಎಂ.ಎಸ್.ಎಂ.ಇ ಗಳಿಗೆ ಪ್ರೋತ್ಸಾಹ ನೀಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ) :–**

೭೦೮ (೮೧೨) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಂ.ಎಸ್.ಎಂ.ಇ ಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರದ ಕ್ರಮಗಳೇನು ;

(ಆ) ಹೊಸದಾಗಿ ಸ್ಥಾಪಿಸಲ್ಪಡುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಪ್ರೋತ್ಸಾಹಗಳು ಯಾವುವು ? (ಸಂಪೂರ್ಣ ವಿವರ ಒದಗಿಸುವುದು)

## ಶಿವಮೊಗ್ಗ ಜಿಲ್ಲೆಗೆ ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೯ (೮೦೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಗೆ ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿ ಬಿಡುಗಡೆಯಾದ ಅನುದಾನ ಎಷ್ಟು ; ಹಾಗೂ ಸದರಿ ಯೋಜನೆಯ ಅನುಷ್ಠಾನವು ಯಾವ ಹಂತದಲ್ಲಿದೆ ;

(ಆ) ಸ್ಮಾರ್ಟ್‌ಸಿಟಿ ಕಂಪನಿಯ ಆಡಳಿತ ವ್ಯವಸ್ಥೆಗೆ ಒಂದು ಕಂಪನಿಗೆ ತಿಂಗಳೊಂದಕ್ಕೆ ತಗುಲುವ ವೆಚ್ಚವೆಷ್ಟು ; (ವಿವರ ನೀಡುವುದು)

(ಇ) ಸ್ಮಾರ್ಟ್‌ಸಿಟಿಯಲ್ಲಿ ಕೈಗೊಳ್ಳುವ ಕಾಮಗಾರಿ ಸ್ಥಳೀಯ ಆಡಳಿತ ಸಂಸ್ಥೆಗೆ ಸಂಬಂಧ ಇಲ್ಲವೆಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಂಡಳಿ ವತಿಯಿಂದ ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೦ (೮೪೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ನಗರದಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು ; ಸದರಿ ಕಾಮಗಾರಿಗಳು ಯಾವ ಹಂತದಲ್ಲಿದೆ ; (ಅನುದಾನದೊಂದಿಗೆ ವಾರ್ಡ್‌ವಾರು, ಕಾಮಗಾರಿವಾರು ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ಬೀದರ್ ನಗರದಲ್ಲಿ ಯಾವುದೇ ಕಾಮಗಾರಿಯನ್ನು ಕೈಗೊಳ್ಳದಿರುವ ವಾರ್ಡ್‌ಗಳಾವುವು ; ಸದರಿ ವಾರ್ಡ್‌ಗಳಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ ; (ವಾರ್ಡ್‌ವಾರು ಮಾಹಿತಿ ಒದಗಿಸುವುದು)

(ಇ) ಬೀದರ್ ನಗರದ ಹೊಸ ವಾರ್ಡ್‌ಗಳಿಗೆ ಒಳಚರಂಡಿ ಮತ್ತು ನೀರು ಸರಬರಾಜು ಮಾಡುವ ಬಗ್ಗೆ ಅಂದಾಜು ಪಟ್ಟಿಯನ್ನು

ಸರ್ಕಾರ ಸಿದ್ದಪಡಿಸಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ವಾರ್ಡ್‌ಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ; (ವಾರ್ಡ್‌ವಾರು, ಕಾಮಗಾರಿವಾರು ಅನುದಾನಗಳ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಬೀದರ್ ನಗರದ ಅಭಿವೃದ್ಧಿಗೆ ಸರ್ಕಾರವು ಇನ್ನು ಹೆಚ್ಚಿನ ಯೋಜನೆಗಳನ್ನು ರೂಪಿಸುವುದೇ ? (ಸಂಪೂರ್ಣ ವಿವರ ನೀಡುವುದು)

## ಬೀದರ್ ನಗರ / ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೧ (೮೪೩) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ನಗರ ಸಭೆ ಮತ್ತು ಪುರಸಭೆ/ಪಟ್ಟಣ ಪಂಚಾಯಿತಿಗಳಿಗೆ ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ಹಣಕಾಸು ನಿಗಮದ ವತಿಯಿಂದ ಅನುಷ್ಠಾನಗೊಳಿಸಿದ ಅಭಿವೃದ್ಧಿ ಯೋಜನೆಗಳು ಯಾವುವು; (ವಿವರ ಒದಗಿಸುವುದು)

(ಆ) ಸದರಿ ಕಾರ್ಯಕ್ರಮಗಳಿಗೆ ಸರ್ಕಾರದಿಂದ ಬಿಡುಗಡೆಗೊಂಡ ಅನುದಾನ ಎಷ್ಟು; ಈ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; (ವರ್ಷವಾರು ಕಾಮಗಾರಿವಾರು ವೆಚ್ಚದೊಂದಿಗೆ ಸ್ಪಷ್ಟ ಮಾಹಿತಿ ಒದಗಿಸುವುದು)

(ಇ) ಬೀದರ್ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳನ್ನು ಪರಿಪೂರ್ಣ ಅಭಿವೃದ್ಧಿಗಾಗಿ ಮೂಲಸೌಕರ್ಯ ಒದಗಿಸಲು ಸಂಪನ್ಮೂಲಗಳ ಕ್ರೋಢೀಕರಣ ಮತ್ತು ಹಂಚಿಕೆಗೆ ಸರ್ಕಾರಕ್ಕೆ ಹೊಸದಾಗಿ ನಗರ

ಸ್ಥಳೀಯ ಸಂಸ್ಥೆಗಳಿಂದ ಪ್ರಸ್ತಾವನೆ ಹಾಗೂ ಕ್ರಿಯಾ ಯೋಜನೆಗಳು ಬಂದಿದೆಯೇ;

(ಈ) ಬಂದಿದ್ದಲ್ಲಿ, ಅವುಗಳು ಯಾವುವು? (ಯೋಜನೆಗಳವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆ ಸ್ಥಗಿತ

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೨ (೮೪೪) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಹುಮನಾಬಾದ ತಾಲ್ಲೂಕಿನ ಹಳ್ಳಿಕೆಡೆನಲ್ಲಿರುವ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ವಿವರ ನೀಡುವುದು)

(ಆ) ಈ ಸಕ್ಕರೆ ಕಾರ್ಖಾನೆಯನ್ನು ಯಾವಾಗ ಪ್ರಾರಂಭಿಸಲಾಯಿತು;

(ಇ) ಸದರಿ ಕಾರ್ಖಾನೆಯು ಪ್ರಸ್ತುತ ಸ್ಥಗಿತಗೊಂಡಿರಲು ಕಾರಣವೇನು; (ಸ್ಪಷ್ಟ ಮಾಹಿತಿ ನೀಡುವುದು)

(ಈ) ಈ ಕಾರ್ಖಾನೆಯು ಪುನರ್ ಪ್ರಾರಂಭಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಮರಳು ಗಣಿಗಾರಿಕೆ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೩ (೮೪೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಯಾವ ಯಾವ ಸ್ಥಳದಲ್ಲಿ ಗುರುತಿಸಲಾಗಿದೆ;

(ಆ) ಹಾಗಿದ್ದಲ್ಲಿ, ಗುರುತಿಸಿರುವ ಮರಳು ನಿಕ್ಷೇಪಗಳನ್ನು ಯಾವಾಗ ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗುತ್ತದೆ; ಹಂಚಿಕೆ ಮಾಡಲು ಅನುಸರಿಸುವ ಮಾನದಂಡವೇನು; ವಿಳಂಬಕ್ಕೆ ಕಾರಣವೇನು; (ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಎಷ್ಟು ಕಲ್ಲು ಗಣಿಗಾರಿಕೆಗೆ ಪರವಾನಗೆ ನೀಡಲಾಗಿದೆ; ಅವುಗಳು ಯಾವುವು; ಯಾವ ಯಾವ ಕಲ್ಲು ಗಣಿ ಪರವಾನಗೆಯಿಂದ ವಾರ್ಷಿಕ ಎಷ್ಟೆಷ್ಟು ರಾಯಲ್ಟಿ ಸರ್ಕಾರಕ್ಕೆ ಸಂದಾಯವಾಗುತ್ತಿದೆ; (ಮಾಹಿತಿ ಒದಗಿಸುವುದು)

(ಈ) ಈ ಪೈಕಿ ಕಳೆದ ಎರಡು ವರ್ಷದಿಂದ ಯಾವ ಯಾವ ಪರವಾನಗೆದಾರರು ಸರ್ಕಾರಕ್ಕೆ ರಾಯಲ್ಟಿ ಕಟ್ಟಲು ಬಾಕಿ ಉಳಿಸಿಕೊಂಡಿದ್ದಾರೆ; ವಸೂಲಾತಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿನ ಅಕ್ರಮ ಕಲ್ಲು ಗಣಿಗಾರಿಕೆ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೪ (೮೨೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖನಿಜ ಪರವಾನಗಿ ಇಲ್ಲದೆ ನಡೆಸುತ್ತಿರುವ ಅಕ್ರಮ ಕಲ್ಲು ಗಣಿಗಾರಿಕೆ ನಿಯಂತ್ರಣಕ್ಕೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; (ವಿವರ ನೀಡುವುದು)

(ಆ) ೨೦೨೦-೨೧ನೇ ಸಾಲಿನಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ನಿಯಂತ್ರಣಕ್ಕೆ ಡ್ರೋನ್ ಸಮೀಕ್ಷೆ ಕೈಗೊಳ್ಳಲು ಮಂಜೂರಾದ ಅನುದಾನವೆಷ್ಟು; ಈ ಸಮೀಕ್ಷೆಯನ್ನು ಯಾವ ಯಾವ ಜಿಲ್ಲೆಗಳಲ್ಲಿ ನಡೆಸಲಾಗಿದೆ; ಈ ಸಮೀಕ್ಷೆಯಿಂದ ಎಷ್ಟು ಅಕ್ರಮ ಕಲ್ಲು ಗಣಿಗಾರಿಕೆಗಳನ್ನು ಗುರುತಿಸಲಾಗಿದೆ; (ಜಿಲ್ಲಾವಾರು ವಿವರವನ್ನು ನೀಡುವುದು)

(ಇ) ಗಣಿಗಾರಿಕೆಯಿಂದ ತೊಂದರೆಗೊಳಗಾದ ಪ್ರದೇಶಗಳ ಅಭಿವೃದ್ಧಿ ಮತ್ತು ಜನರ ಜೀವನಮಟ್ಟ ಸುಧಾರಣೆಗೆ ಗುತ್ತಿಗೆದಾರರಿಂದ ಜಿಲ್ಲಾ ನಿಧಿಗೆ ರಾಜಧನ ಸಂಗ್ರಹ ಮಾಡಲಾಗುತ್ತಿದೆಯೇ; ಮಾಡುತ್ತಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಸಂಗ್ರಹವಾದ ಮತ್ತು ಬಳಕೆ ಮಾಡಿರುವ ವಂತಿಗೆ ಎಷ್ಟು? (ಜಿಲ್ಲಾವಾರು ವಿವರವನ್ನು ನೀಡುವುದು)

## ರಾಜ್ಯದಲ್ಲಿನ ಮರಳು ಅಭಾವ ಕುರಿತು

**ಶ್ರೀ ಹೆಚ್. ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೫ (೮೧೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮರಳು ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗೆ ರೂಪಿಸಿರುವ ನೀತಿ ನಿಯಮಗಳೇನು; (ವಿವರ ಒದಗಿಸುವುದು)

(ಆ) ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮರಳು ಪೂರೈಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ಹಾಗೂ ಸರ್ಕಾರದಿಂದ ಮರಳು ಪೂರೈಸಲು ಗುರುತಿಸಿರುವ ಸ್ಥಳಗಳು ಯಾವುವು ಹಾಗೂ ಸರ್ಕಾರ ಪ್ರತಿ ಟನ್ ಮರಳಿಗೆ ನಿಗದಿಪಡಿಸಿರುವ ದರವೆಷ್ಟು;

(ಇ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರದಲ್ಲಿ ಎಷ್ಟು ಟನ್ ಮರಳು ಪೂರೈಕೆಗೆ ಬೇಡಿಕೆ ಇತ್ತು; ಎಷ್ಟು ಟನ್ ಮಾರಾಟ ಮಾಡಲಾಗಿದೆ; ಬೇಡಿಕೆಯಂತೆ ಪೂರ್ಣವಾಗಿ ಮರಳು ಪೂರೈಸಲಾಗಿದೆಯೇ? (ವಿವರ ನೀಡುವುದು)

# ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳ ಕುರಿತು

**ಶ್ರೀ ಹೆಚ್. ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೧೬ (೮೧೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡ–ಗಳೇನು; ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ಮತ್ತು ಈ ಅಂಗಡಿಗಳು ಯಾರ ಹೆಸರಿನಲ್ಲಿ ತೆರೆಯಲಾಗಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ನ್ಯಾಯಬೆಲೆ ಅಂಗಡಿಯನ್ನು ಹೊಂದಿರುವವರು ಮರಣ ಹೊಂದಿದ್ದಲ್ಲಿ, ಅವರು ನಡೆಸುತ್ತಿರುವ ಅಂಗಡಿಯನ್ನು ಅವರ ವಾರಸುದಾರರಿಗೆ ನೀಡಲು ಅವಕಾಶವಿದೆಯೇ; (ಮಾಹಿತಿ ನೀಡುವುದು)

(ಇ) ನ್ಯಾಯಬೆಲೆ ಅಂಗಡಿಯ ಮಾಲೀಕರು ಸರ್ಕಾರ ನಿಗದಿಪಡಿಸಿರುವ ಪ್ರಮಾಣದ ದಿನಸಿ ಸಾಮಗ್ರಿಗಳನ್ನು ಎಪಿಎಲ್ ಮತ್ತು ಬಿಪಿಎಲ್ ಕಾರ್ಡ್‌ದಾರರಿಗೆ ವಿತರಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ; (ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಪ್ರಮಾಣದ ದಿನಸಿ ಸಾಮಾಗ್ರಿಗಳನ್ನು ನೀಡದೆ ಅವ್ಯವಹಾರದಲ್ಲಿ ತೊಡಗಿರುವ ಪ್ರಕರಣಗಳು ಕಂಡುಬಂದಿವೆಯೇ; ಕಂಡುಬಂದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಅಂಗಡಿ ಮಾಲೀಕರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಪ್ರಕರಣವಾರು ಮಾಹಿತಿ ನೀಡುವುದು)

## ಸಹಕಾರ ಇಲಾಖೆಯಿಂದ ಕಳೆದ ಸಾಲುಗಳಲ್ಲಿ ಮಾಡಿದ ಸಾಲಮನ್ನಾ ಯೋಜನೆ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೭ (೮೨೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಇಲಾಖೆಯಿಂದ ಕಳೆದ ಸಾಲುಗಳಲ್ಲಿ ಸಾಲ ಮನ್ನಾ ಯೋಜನೆಯಡಿಯಲ್ಲಿ ಸಾಲಮನ್ನಾ ಮಾಡಲು ವಿವಿಧ ಸಹಕಾರ ಸಂಸ್ಥೆಗಳಿಗೆ ಸಹಾಯಧನ ಬಿಡುಗಡೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಸಹಾಯಧನದ ವಿವರವನ್ನು ಜಿಲ್ಲಾವಾರು ಸಹಕಾರ ಸಂಸ್ಥೆಗಳ ವಿವರದೊಂದಿಗೆ ಒದಗಿಸುವುದು;

(ಆ) ರಾಜ್ಯದ ಹಲವು ಜಿಲ್ಲೆಗಳಲ್ಲಿ ವಿವಿಧ ಸಹಕಾರಿ ಸಂಸ್ಥೆಗಳು ಸಹಾಯಧನದ ಹಣವನ್ನು ದುರುಪಯೋಗಪಡಿಸಿಕೊಂಡು ಫಲಾನುಭವಿಗಳಿಗೆ ಅನ್ಯಾಯವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಪ್ರಕರಣಗಳ ವಿವರ ನೀಡುವುದು ಹಾಗೂ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ವಿಚಾರಣೆ ನಡೆಸುತ್ತಿರುವ ಪ್ರಕರಣಗಳೆಷ್ಟು; ಅವು ಯಾವುವು? (ಸಹಕಾರ ಸಂಸ್ಥೆಗಳ ವಿವರಗಳನ್ನು ಒದಗಿಸುವುದು)

## ಅಕ್ರಮ ಕಲ್ಲುಗಣಿಗಾರಿಕೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೮ (೭೮೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಕ್ರಮ ಕಲ್ಲು ಗಣಿಗಾರಿಕೆಯಿಂದ ರಾಜ್ಯಕ್ಕೆ ಆಗುತ್ತಿರುವ ನಷ್ಟ ಎಷ್ಟು; ಇದಕ್ಕೆ ಯಾರು ಹೊಣೆ;

(ಆ) ಇತ್ತೀಚಿನ ದಿನಗಳಲ್ಲಿ ಅಕ್ರಮ ಗಣಿಗಾರಿಕೆಗಾಗಿ ಸಂಗ್ರಹಿಸಿದ ಸ್ಫೋಟಕಗಳು ಸ್ಫೋಟಗೊಂಡ ಕಾರಣಕ್ಕಾಗಿ ಮೃತರಾದವರ ಸಂಖ್ಯೆ ಎಷ್ಟು;

(ಇ) ಈ ಅಕ್ರಮ ಗಣಿಗಾರಿಕೆಗೆ ಸಹಕರಿಸಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಸ್ಥಳೀಯ ಅಧಿಕಾರಿಗಳ ಗಮನಕ್ಕೆ ಬಾರದೆ ಈ ರೀತಿಯ ಅಕ್ರಮ ಕಲ್ಲು ಗಣಿಗಾರಿಕೆ ನಡೆಯಲು ಸಾಧ್ಯವೇ ; ಈ ಕುರಿತು ಸರ್ಕಾರದ ನಿಲುವೇನು?

## ಮೋಟಾರು ವಾಹನ ತಯಾರಿಕಾ ಕಂಪನಿಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೯ (೭೮೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಮೋಟಾರ್ ವಾಹನ ತಯಾರಿಕಾ ಘಟಕಗಳು ಇವೆ; (ಕಂಪನಿವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಮೋಟಾರು ವಾಹನ ತಯಾರಿಕಾ ಘಟಕಗಳಲ್ಲಿ ಎಷ್ಟು ಕಂಪನಿಗಳು ವಾಣಿಜ್ಯ ವಾಹನಗಳನ್ನು ತಯಾರಿಸುತ್ತಿವೆ; ಹಾಗೂ ಎಷ್ಟು ಕಂಪನಿಗಳು ಪ್ರಯಾಣಿಕರ ವಾಹನವನ್ನು ತಯಾರಿಸುತ್ತವೆ;

(ಇ) ಕಳೆದ ೧ ವರ್ಷದಲ್ಲಿ ಕಾರ್ಮಿಕರ ಮುಷ್ಕರ, ನಷ್ಟ ಎಂಬ ಕಾರಣಗಳಿಗಾಗಿ ಎಷ್ಟು ಕಂಪನಿಗಳು ತಮ್ಮ ವ್ಯವಹಾರವನ್ನು ಸ್ಥಗಿತಗೊಳಿಸಿವೆ; ಸ್ಥಗಿತಗೊಂಡ ಕಂಪನಿಗಳು ಪುನರಾರಂಭ ಮಾಡುವಂತಾಗಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೨೦ (೭೮೩) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಣ್ಣ ಕೈಗಾರಿಕೆಗಳಿಗೆ ಸಂಬಂಧಿಸಿದಂತೆ ಕಳೆದ ೫ ವರ್ಷಗಳಲ್ಲಿ ಎಷ್ಟು ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಭಿವೃದ್ಧಿಪಡಿಸಲಾದ ಕೈಗಾರಿಕಾ ಪ್ರದೇಶಗಳಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಪ್ರಾರಂಭವಾಗಿವೆ;

(ಇ) ಕೈಗಾರಿಕೆಗಳ ಸಾಮಾನ್ಯ ಉತ್ಪನ್ನಗಳು ಯಾವುವು;

(ಈ) ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ಯಾವ ರೀತಿಯ ಪ್ರೋತ್ಸಾಹಗಳನ್ನು ನೀಡಿರುತ್ತವೆ? (ವಿವರ ನೀಡುವುದು)

## ನಗರಾಭಿವೃದ್ಧಿ ಇಲಾಖೆಯಿಂದ ಸಿಂಗಲ್ ಸೈಟ್ ಲೇಔಟ್ ಅನುಮತಿ ನೀಡುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೧ (೭೮೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಿಗಳು ಸಣ್ಣ ಜಾಗಗಳಲ್ಲಿ ಕಡು ಬಡವರಿಗೆ ಮನೆಯನ್ನು ಕಟ್ಟಲು ಸಿಂಗಲ್ ಸೈಟ್ ಲೇಔಟ್ ಅನುಮತಿಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಿಂಗಲ್ ಸೈಟ್ ಲೇಔಟ್‌ಗಾಗಿ ಮನವಿ ಸಲ್ಲಿಸಿದ ಎಷ್ಟು ದಿನಗಳ ಒಳಗಾಗಿ ಸಂಬಂಧಿಸಿದ ನಗರಾಭಿವೃದ್ಧಿ ಪ್ರಾಧಿಕಾರಗಳು ಅನುಮತಿಯನ್ನು ನೀಡುತ್ತವೆ ; ಈ ಕುರಿತು ಇರುವ ನಿಯಮಗಳೇನು ;

(ಇ) ನಗರಾಭಿವೃದ್ಧಿ ಪ್ರಾಧಿಕಾರಗಳು ಅಧಿಕಾರಿಗಳಿಗೆ ಲಂಚ ಸಂಗ್ರಹಿಸಿ ನೀಡುವ ಬ್ರೋಕರ್‌ಗಳ ಅಡ್ಡೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು?

## ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಬಾಕಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨ (೭೮೧) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳು ರೈತರಿಗೆ ಕಬ್ಬಿನ ಬಾಕಿಯನ್ನು ಪಾವತಿ ಮಾಡಿರುವುದಿಲ್ಲ ; ಸದರಿ ಸಕ್ಕರೆ ಕಾರ್ಖಾನೆಗಳ ಹೆಸರಿನೊಂದಿಗೆ ಕಾರ್ಖಾನೆಗಳು ರೈತರಿಗೆ ಕೊಡಬೇಕಾಗಿರುವ ಬಾಕಿ ಮೊತ್ತ ಎಷ್ಟು ; (ಕಾರ್ಖಾನೆವಾರು ವಿವರ ನೀಡುವುದು)

(ಆ) ಸಕ್ಕರೆ ಕಾರ್ಖಾನೆಗಳು ರೈತರಿಗೆ ಒಂದು ಟನ್ ಕಬ್ಬಿಗೆ ಎಷ್ಟು ಮೊತ್ತವನ್ನು ನೀಡುತ್ತವೆ ; (ಕಾರ್ಖಾನೆಗಳ ವಿವರ ನೀಡುವುದು)

(ಇ) ಸರ್ಕಾರವು ಒಂದು ಟನ್ ಕಬ್ಬಿಗೆ ನಿಗದಿಪಡಿಸಿದ ಕನಿಷ್ಠ ಬೆಂಬಲ ಬೆಲೆ ಎಷ್ಟು ?

## ರಾಜ್ಯದಲ್ಲಿರುವ ಕಲ್ಲು ಕ್ವಾರಿಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ) :–**

೭೨೩ (೮೪೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಧಿಕೃತ/ಅನಧಿಕೃತ ಕಲ್ಲು ಕ್ವಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಆ) ಈ ಅನಧಿಕೃತ ಕಲ್ಲು ಕ್ವಾರಿಗಳ ನಿಯಂತ್ರಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಅಧಿಕೃತ ಕಲ್ಲು ಕ್ವಾರಿಗಳಲ್ಲಿ ಸ್ಫೋಟಕ ಸಾಮಾಗ್ರಿ ಸಾಗಾಣಿಕೆ/ ಶೇಖರಣೆ/ಬಳಕೆ/ವಿಲೇವಾರಿ ಮುಂತಾದ ಕಾರ್ಯಗಳ ಕುರಿತು ಪ್ರಾಮಾಣಿಕ ಕಾರ್ಯಾಚರಣಾ ವಿಧಾನಗಳನ್ನು (Standard Operation Procedure) ಪಾಲನೆ ಮಾಡಲು ಸರ್ಕಾರದಿಂದ ಯಾವುದಾದರೂ ಆದೇಶ ಹೊರಡಿಸಲಾಗಿದೆಯೇ; (ವಿವರ ನೀಡುವುದು)

(ಈ) ಅಧಿಕೃತ ಕಲ್ಲು ಕ್ವಾರಿಗಳಲ್ಲಿ ಸ್ಫೋಟಕ ಸಾಮಾಗ್ರಿ ಸಾಗಾಣಿಕೆ/ ಶೇಖರಣೆ/ಬಳಕೆ/ವಿಲೇವಾರಿ ಮುಂತಾದ ಕಾರ್ಯಗಳ ಕುರಿತು ಪ್ರಮಾಣಿತ ಕಾರ್ಯಾಚರಣಾ ವಿಧಾನಗಳ (Standard Operation Procedure) ಪಾಲನೆ ಮಾಡುವಲ್ಲಿ ವಿಫಲರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ?

## ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ) :–**

೭೨೪ (೮೩೯) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದಿಂದ ಅನುಮತಿ ಪಡೆದು ಸ್ಥಾಪಿತವಾಗಿರುವ ಮತ್ತು ಚಾಲ್ತಿಯಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಆ) ಈ ಸಣ್ಣ ಕೈಗಾರಿಕೆಗಳಲ್ಲಿ/ಕಾರ್ಖಾನೆಗಳಲ್ಲಿ ಉದ್ಯೋಗ ಮಾಡುತ್ತಿರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಇ) ರಾಜ್ಯ ಸರ್ಕಾರದಿಂದ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಮತ್ತು ನಿರ್ವಹಣೆಗೆ ನೆರವಾಗುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಈ) ಕೊರೋನ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಬಾಧಿತರಾಗಿ ಅಧಿಕೃತವಾಗಿ ಮುಚ್ಚಿರುವ ಕಾರ್ಖಾನೆಗಳ/ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಉ) ಕೊರೋನ ಸಾಂಕ್ರಮಿಕ ರೋಗದ ಹಿನ್ನಲೆಯಲ್ಲಿ ಭಾದಿತರಾಗಿ ಅಧಿಕೃತವಾಗಿ ಮುಚ್ಚಿರುವ ಕಾರ್ಖಾನೆಗಳ/ಕೈಗಾರಿಕೆಗಳಿಂದ ಕೆಲಸ ಕಳೆದುಕೊಂಡಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಊ) ಈ ಕುರಿತು ಸರ್ಕಾರದ ಸುಧಾರಣೆಯ ಕ್ರಮವೇನು ? (ವಿವರ ನೀಡುವುದು)

## ಅಲಂಬಿಕ್ ಗ್ಲಾಸ್ ಕಾರ್ಖಾನೆ ನಿರ್ಮಾಣಕ್ಕೆ ಸರ್ಕಾರದಿಂದ ಭೂಮಿ ಮಂಜೂರು ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ) :–**

೭೨೫ (೮೩೮) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಅಲಂಬಿಕ್ ಗ್ಲಾಸ್ ಕಾರ್ಖಾನೆ ನಿರ್ಮಾಣಕ್ಕಾಗಿ ಸರ್ಕಾರದಿಂದ (ಕೆ.ಐ.ಎ.ಡಿ.ಬಿ) ಭೂಮಿಯನ್ನು ಮಂಜೂರು ಮಾಡಲಾಗಿದೆಯೇ; ಮಾಡಿದ್ದಲ್ಲಿ, ಎಷ್ಟು ಎಕರೆ ಭೂಮಿಯನ್ನು ಸರ್ಕಾರ ಮಂಜೂರು ಮಾಡಲಾಗಿದೆ ; (ವಿವರ ನೀಡುವುದು)

(ಆ) ಈ ಹಿಂದೆ ಸದರಿ ಕಾರ್ಖಾನೆಯು ತನ್ನ ಕಾರ್ಮಿಕರ ಶ್ರೇಯೋಭಿವೃದ್ಧಿಯ ಪರವಾಗಿ ಕಾರ್ಮಿಕರಿಗೆ ವಾಸಿಸಲು ಮನೆ ಕಟ್ಟಿ ಕೊಡುವ ಉದ್ದೇಶದ ಸಲುವಾಗಿ ಸರ್ಕಾರದಿಂದ ಭೂಮಿಯನ್ನು ಮಂಜೂರು ಮಾಡಿಸಿಕೊಂಡಿದೆಯೇ ; ಮಾಡಿಸಿಕೊಂಡಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಇ) ಕಾರ್ಮಿಕರಿಗೆ ಮನೆ ಕಟ್ಟಿ ಕೊಡುವ ಉದ್ದೇಶದ ಸಲುವಾಗಿ ಸರ್ಕಾರದಿಂದ ಜಮೀನು ಪಡೆದು ಅನಂತರದಲ್ಲಿ ಬೇರೆ ಉದ್ದೇಶಕ್ಕಾಗಿ ಭೂಮಿಯನ್ನು ಬಳಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು? (ವಿವರ ನೀಡುವುದು)

## ಸಹಕಾರ ಇಲಾಖೆಯಲ್ಲಿ ನಿಯಮ ೩೨ ರಡಿ ನೀಡುತ್ತಿರುವ ಪದೋನ್ನತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೭೨೬ (೮೧೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಹಕಾರ ಇಲಾಖೆಯಲ್ಲಿ ನಿಯಮ ೩೨ ರಡಿ ವಿವಿಧ ವೃಂದದ ಅಧಿಕಾರಿಗಳಿಗೆ ಪದೋನ್ನತಿಯನ್ನು ನೀಡಬೇಕಾದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಗಣಿಸುವುದು ಅವಶ್ಯಕವಾಗಿರುತ್ತದೆಯೇ ; (ವಿವರ ನೀಡುವುದು)

(ಆ) ಈ ತಹಲ್‌ವರೆವಿಗೆ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಉಲ್ಲಂಘನೆ ಮಾಡಿ ಯಾವುದೇ ಹುದ್ದೆಗೆ ನಿಯಮ ೩೨ ರಡಿಯಲ್ಲಿ ಪದೋನ್ನತಿಯನ್ನು ನೀಡಲಾಗಿದೆಯೇ; (ವಿವರ ನೀಡುವುದು)

(ಇ) ಇಲಾಖೆಯಲ್ಲಿನ ವಿವಿಧ ವೃಂದದ ಹುದ್ದೆಗಳಿಗೆ ನಿಯಮ ೩೨ ರಡಿ ಪದೋನ್ನತಿ ನೀಡಿದ್ದು, ನಂತರ ಮುಂದಿನ ಹುದ್ದೆಗೆ ಪದೋನ್ನತಿ ನೀಡುವಾಗ ನಿಯಮ ೩೨ ರಡಿ ಕರ್ತವ್ಯ ನಿರ್ವಹಿಸಿದ ಅವಧಿಯನ್ನು ಪದೋನ್ನತಿಗೆ ಅರ್ಹ ಸೇವಾ ಅವಧಿಯೆಂದು ಪರಿಗಣಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಈ) ನಿಯಮ ೩೨ ರಡಿಯಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿಯನ್ನು ಮುಂದಿನ ಹುದ್ದೆಯ ಪದೋನ್ನತಿಗೆ ಅರ್ಹ ಸೇವಾ ಅವಧಿಯೆಂದು ಪರಿಗಣಿಸಬೇಕೆಂದು ಇಲಾಖೆಯಲ್ಲಿ ರಚಿಸಿಕೊಂಡಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿದೆಯೇ ; (ವಿವರ ನೀಡುವುದು)

(ಉ) ಸಿ.ಡಿ.ಒ ಗಳ ಜ್ಯೇಷ್ಠತಾ ಪಟ್ಟಿ ಉಲ್ಲಂಘನೆ ಮಾಡಿ ಎಂ.ಆರ್.ಸಿ.ಎಸ್ ಹುದ್ದೆಗೆ ಪದೋನ್ನತಿ ನೀಡಿರುವ ಕುರಿತು ಸರ್ಕಾರದ ಹಂತದಲ್ಲಿ ನಿರ್ವಹಿಸಿರುವ ಕಡತ ಸಂಖ್ಯೆ : ಸಇ/ಎಸಸೇ/೩೩೬/೨೦೧೬ಗೆ ಸಂಬಂಧಿಸಿದಂತೆ ಇಲ್ಲಿಯುವರೆಗೆ ಪದೋನ್ನತಿಯುಲ್ಲಿ ಅನ್ಯಾಯುವಾಗಿರುವ ಅಧಿಕಾರಿಗಳಿಗೆ ನ್ಯಾಯು ಒದಗಿಸಿ ಎಂ.ಆರ್.ಸಿ.ಎಸ್. ಹುದ್ದೆಗೆ ನಿಯಮ ೩೨ ರಡಿ ಪದೋನ್ನತಿ ನೀಡಿರುವುದಿಲ್ಲವೇ ? (ಪೂರ್ಣ ವಿವರ ನೀಡುವುದು)

## ಮಂಡ್ಯ ನಗರದ ಉದ್ಯಾನವನಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೭೨೭ (೮೧೪) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಒಟ್ಟು ಉದ್ಯಾನವನಗಳು ಎಷ್ಟು ; (ವಿವರ ನೀಡುವುದು)

(ಆ) ಸದರಿ ಉದ್ಯಾನವನಗಳ ನಿರ್ವಹಣೆಗೆ ನಗರಸಭೆ ಕೈಗೊಂಡಿರುವ ಕ್ರಮಗಳೇನು ;

(ಇ) ಇವುಗಳ ನಿರ್ವಹಣೆಯನ್ನು ನಗರಸಭೆ ನಿರ್ವಹಿಸುತ್ತಿದೆಯೇ ಅಥವಾ ಹೊರಗುತ್ತಿಗೆ ನೀಡಲಾಗಿದೆಯೇ ;

(ಈ) ಸದರಿ ಉದ್ಯಾನವನಗಳ ಅಭಿವೃದ್ಧಿಗೆ ಅನುದಾನ ನೀಡಲಾಗಿದೆಯೇ? (ವಿವರ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳ ಪೌರಕಾರ್ಮಿಕರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೭೨೮ (೮೧೫) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರೆಷ್ಟು ; (ವಿವರ ನೀಡುವುದು)

(ಆ) ಇದರಲ್ಲಿ ಖಾಯಂ ನೌಕರರು ಎಷ್ಟು ; ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರೆಷ್ಟು ;

(ಇ) ಇದರಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರಿಗೆ ನೀಡುತ್ತಿರುವ ವೇತನ ಎಷ್ಟು ;

(ಈ) ಸಮಾನ ಕೆಲಸಕ್ಕೆ ಸಮಾನ ವೇತನವನ್ನು ಪಾವತಿಸಲಾಗುತ್ತಿದೆಯೇ; ಇಲ್ಲವಾದಲ್ಲಿ, ಕಾರಣವೇನು ;

(ಉ) ಗುತ್ತಿಗೆ, ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಡಿತರ ಅಂಗಡಿಗಳಲ್ಲಿ ಅವ್ಯವಹಾರ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೯ (೮೬೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪಡಿತರ ಅಂಗಡಿಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಸ್ವೀಕೃತವಾಗದ ದೂರುಗಳ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಆರೋಪಗಳು ಸಾಬೀತಾಗಿವೆ ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

(ಆ) ಅವ್ಯವಹಾರ ಮಾಡಿರುವುದು ಸಾಬೀತಾದ ಪಡಿತರ ಅಂಗಡಿಯ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

## ಎಂ.ಎಸ್.ಎಂ.ಇ. ಯಲ್ಲಿ ಬೆಳವಣಿಗೆ ಮತ್ತು ಅರುವಿನ ಕೊರತೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೭೩೦ (೮೬೮) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಾಗೃತಿಯ ಕೊರತೆಯಿಂದಾಗಿ ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಉದ್ಯಮಗಳ (ಎಂ.ಎಸ್.ಎಂ.ಇ) ಯೋಜನೆಗಳ ಪ್ರಯೋಜನಗಳು ಸಾಮಾನ್ಯ ಜನರಿಗೆ ತಲುಪುತ್ತಿಲ್ಲದ ಪರಿಣಾಮವಾಗಿ ಬಜೆಟ್‌ನಲ್ಲಿ ಹಂಚಿಕೆಯಾದ ಅನುದಾನವನ್ನು ಸರಿಯಾಗಿ ಬಳಕೆ ಮಾಡುವ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆಯೇ ;

(ಆ) ಸಣ್ಣ ಉದ್ಯಮಿಗಳ ವ್ಯವಹಾರವನ್ನು ಹೆಚ್ಚಿಸಲು ಸರ್ಕಾರವು ತನ್ನ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲು ಕ್ರಮಗಳನ್ನು ಕೈಗೊಂಡಿದೆಯೇ ; (ವಿವರ ನೀಡುವುದು)

(ಇ) ಇಲ್ಲವಾದಲ್ಲಿ, ಅದಕ್ಕೆ ಕಾರಣಗಳೇನು ;

(ಈ) ಕಳೆದ ಐದು ವರ್ಷಗಳಲ್ಲಿ ಮತ್ತು ಪ್ರಸ್ತುತ ವರ್ಷದಲ್ಲಿ ಹಂಚಿಕೆ ಮಾಡಲಾದ ಅನುದಾನದಲ್ಲಿ ಖರ್ಚು ಮಾಡಲಾದ ಹಣವೆಷ್ಟು?

## ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಾಮರ್ಥ್ಯದಲ್ಲಿ ಇಳಿಮುಖ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ):–**

೭೩೧ (೮೬೭) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮ ಕ್ಷೇತ್ರದಲ್ಲಿ ಉತ್ಪಾದನಾ ಸಾಮರ್ಥ್ಯವು ಕಡಿಮೆಯಾಗುತ್ತಿರುವುದು ಮತ್ತು ದೇಶದಲ್ಲಿ ಆಂತರಿಕ ಸಾಮರ್ಥ್ಯದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪರಿಸ್ಥಿತಿಯನ್ನು ನಿಭಾಯಿಸಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಕೈಗಾರಿಕೆಗಳ ನೋಂದಣಿಯಲ್ಲಿ ಎದುರಾಗುವ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು;

(ಈ) ಮುಂದಿನ ಮೂರು ವರ್ಷಗಳಲ್ಲಿ ನಿಗದಿಪಡಿಸಿದ ಬೆಳವಣಿಗೆಯ ಗುರಿಗಳನ್ನು ಸಾಧಿಸಲು ಸರ್ಕಾರ ಕೈಗೊಂಡ / ಕೈಗೊಳ್ಳಬೇಕಾದ ಕ್ರಮಗಳೇನು ?

## ರೈತರು ಸಹಕಾರ ಮತ್ತು ವಾಣಿಜ್ಯ ಬ್ಯಾಂಕುಗಳಲ್ಲಿ ಪಡೆದ ಸಾಲ ಮನ್ನಾ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :-**

೭೩೨ (೮೬೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯, ೨೦೧೯-೨೦ ಮತ್ತು ೨೦೨೦-೨೧ ನೇ ಸಾಲುಗಳಲ್ಲಿ ಆಯವ್ಯಯದಲ್ಲಿ ಸಹಕಾರ ಮತ್ತು ವಾಣಿಜ್ಯ ಬ್ಯಾಂಕುಗಳಲ್ಲಿ ರೈತರು ಪಡೆದ ಸಾಲವನ್ನು ಮನ್ನಾ ಮಾಡಲು ಸಾಲ ಮನ್ನಾ ಯೋಜನೆ ಅಡಿ ಒದಗಿಸಿದ ಹಣವೆಷ್ಟು ;

(ಆ) ಈ ಅನುದಾನದಲ್ಲಿ ೨೦೧೮-೧೯, ೨೦೧೯-೨೦ ಮತ್ತು ೨೦೨೦-೨೧ ನೇ ಸಾಲುಗಳಲ್ಲಿ ಸಹಕಾರ ಮತ್ತು ವಾಣಿಜ್ಯ ಬ್ಯಾಂಕುಗಳು ರೈತರ ಸಾಲ ಮನ್ನಾ ಮಾಡಿದ ಹಣವೆಷ್ಟು ; (ಜಿಲ್ಲಾವಾರು ಮತ್ತು ಬ್ಯಾಂಕುವಾರು ಮಾಹಿತಿ ನೀಡುವುದು)

(ಇ) ಸಾಲ ಮನ್ನಾ ಯೋಜನೆಯ ಲಾಭ ಪಡೆಯಲು ವಿಧಿಸಿರುವ ಷರತ್ತುಗಳು ಹಾಗೂ ಮಾನದಂಡಗಳನ್ನು ರೈತರು ಪೂರೈಸಿದ್ದು, ಸರ್ಕಾರ ಅಗತ್ಯವಿರುವ ಅನುದಾನವನ್ನು ಪೂರೈಸದಿರುವುದರಿಂದ ರೈತರ ಸಾಲ ಮನ್ನಾ ಆಗದೇ ಉಳಿದಿರುವ ಪ್ರಕರಣಗಳೆಷ್ಟು ; ಮತ್ತು ತಂತ್ರಾಂಶ ದೋಷದಿಂದ ರೈತರ ಸಾಲ ಮನ್ನಾ ಆಗದಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ಮತ್ತು ಬ್ಯಾಂಕುವಾರು ವಿವರ ನೀಡುವುದು)

(ಈ) ಎಲ್ಲಾ ಷರತ್ತು ಹಾಗೂ ಮಾದಂಡಗಳೇನು ; ಪೂರೈಸಿರುವ ಅರ್ಹತೆಯುಳ್ಳ ರೈತನ ಸಾಲ ಮನ್ನಾ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮುಧೋಳ ನಗರಕ್ಕೆ ೨೪x೭ ಕುಡಿಯುವ ನೀರು ಸರಬರಾಜು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೩ (೮೦೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಧೋಳ ನಗರಕ್ಕೆ ೨೪x೭ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಯೋಜನೆಗಳಾವುವು;

(ಆ) ಯಾವ ಯಾವ ಮೂಲಗಳಿಂದ ಮುಧೋಳ ನಗರಕ್ಕೆ ಕುಡಿಯುವ ನೀರನ್ನು ಪೂರೈಸಲಾಗುತ್ತಿದೆ ;

(ಇ) ಮುಧೋಳ ನಗರಕ್ಕೆ ಪ್ರತಿ ದಿನ ಅವಶ್ಯಕತೆ ಇರುವ ಸರಾಸರಿ ಕುಡಿಯುವ ನೀರಿನ ಪ್ರಮಾಣವೆಷ್ಟು ; ಲಭ್ಯವಿರುವ ನೀರಿನ ಪ್ರಮಾಣವೆಷ್ಟು ; ಪೂರೈಕೆ ಮಾಡುತ್ತಿರುವ ನೀರಿನ ಪ್ರಮಾಣವೆಷ್ಟು;

(ಈ) ಶಾಶ್ವತ ಕುಡಿಯುವ ನೀರಿನ ಯೋಜನೆ ಬಗ್ಗೆ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳಾವುವು?

## ಸಣ್ಣ ಉದ್ಯಮಗಳಿಗೆ ಉತ್ತೇಜನ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ) :–**

೭೩೪ (೮೨೬) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಸಣ್ಣ ಉದ್ಯಮಗಳನ್ನು ತೆರೆಯಲು ಅನುಸರಿಸಬೇಕಾದ ಮಾರ್ಗಸೂಚಿಗಳೇನು ;

(ಆ) ಹತ್ತು ಹಲವು ಇಲಾಖೆಗಳಿಂದ ಅನುಮತಿ ಪತ್ರ ಪಡೆಯಲು ಉದ್ದಿಮೆದಾರರು ಅಲೆದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕುರಿತು ಏಕಗವಾಕ್ಷಿ ಪದ್ಧತಿಯನ್ನು ಜಾರಿಗೊಳಿಸಿ ಉದ್ದಿಮೆದಾರರಿಗೆ ಅನುಕೂಲ ಒದಗಿಸಲಾಗುವುದೇ ?

## ಬೆಂಗಳೂರು ನಗರದಲ್ಲಿರುವ ಕೈಗಾರಿಕಾ ಪ್ರದೇಶಗಳು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ) :–**

೭೩೫ (೮೨೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಕೈಗಾರಿಕಾ ಪ್ರದೇಶಗಳಾವುವು; ಈ ಪೈಕಿ ಖಾಸಗಿ ಮತ್ತು ಸರ್ಕಾರಿ ಕೈಗಾರಿಕಾ ಪ್ರದೇಶಗಳೆಷ್ಟು;

(ಆ) ಈ ಕೈಗಾರಿಕಾ ಪ್ರದೇಶಗಳಿಗೆ ಅಗತ್ಯವಿರುವ ಮೂಲ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅವಶ್ಯ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರ ಮುಂದಾಗುವುದೇ ?

## ಅಕ್ರಮ ಬಿ.ಪಿ.ಎಲ್. ಕಾರ್ಡ್‌ಗಳನ್ನು ಪತ್ತೆ ಮಾಡುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೬ (೭೯೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಕ್ರಮವಾಗಿ ಬಿ.ಪಿ.ಎಲ್ ಕಾರ್ಡ್ ಹೊಂದಿರುವವರನ್ನು ಪತ್ತೆ ಮಾಡುವ ಹಾಗೂ ಕ್ರಮ ಕೈಗೊಳ್ಳುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆಯೇ;

(ಆ) ಕಳೆದ ಒಂದು ವರ್ಷದಲ್ಲಿ ಪತ್ತೆಯಾದ ಅಕ್ರಮ ಬಿ.ಪಿ.ಎಲ್ ಕಾರ್ಡುಗಳೆಷ್ಟು ;

(ಇ) ಅಕ್ರಮ ಮಾಡಿದವರ ವಿರುದ್ಧ ಕೈಗೊಂಡ ಕ್ರಮಗಳೇನು ; (ವಿವರವನ್ನು ಒದಗಿಸುವುದು)

(ಈ) ಅಕ್ರಮ ಕಾರ್ಡುಗಳ ಪತ್ತೆಗೆ ಸರ್ವೆ ನಡೆಸಲಾಗುತ್ತಿದೆಯೇ ?

## ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ ) :–**

೭೩೭ (೮೬೨) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದಲ್ಲಿ ಯಾವ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಪರಿವರ್ತಿಸಲು ಕ್ರಮ ವಹಿಸಲಾಗಿದೆ ; ಪಟ್ಟಣ ಪಂಚಾಯಿತಿಯುನ್ನಾಗಿ ಪರಿವರ್ತಿಸಲು ಬಾಕಿ ಇರುವ ಪಂಚಾಯತಿಗಳ ಸಂಖ್ಯೆ ಎಷ್ಟು ? (ವಹಿಸಲಾದ ಕ್ರಮಗಳ ಕುರಿತು ಸಂಪೂರ್ಣ ವಿವರ ನೀಡುವುದು)

## ನಂದಿನಿ ಪಾರ್ಲರ್ ಬೂತ್‌ಗಳ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ ) :–**

೭೩೮ (೮೬೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ನಂದಿನಿ ಬೂತ್‌ಗಳ ಸಂಖ್ಯೆ ಎಷ್ಟು ; ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಒಟ್ಟು ಬೂತ್‌ಗಳ ಸಂಖ್ಯೆ ಎಷ್ಟು ;

(ಆ) ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಂದಿನಿ ಪಾರ್ಲರ್/ ನಂದಿನಿ ಬೂತ್‌ಗಳ ಪ್ರಾಂಚೈಸಿಯನ್ನು ಪಡೆಯುವುದು ಹೇಗೆ; ಅದಕ್ಕೆ ಇರುವ ಮಾನದಂಡಗಳೇನು ; ಪ್ರಾಂಚೈಸಿಯನ್ನು ಪಡೆಯುವವರಿಗೆ ಸಿಗುವ ಸೌಲಭ್ಯಗಳೇನು ;

(ಇ) ಎಷ್ಟು ಕಿ.ಮೀ. ಗೆ ಒಂದರಂತೆ ನಂದಿನಿ ಬೂತ್‌ಗಳನ್ನು ಸ್ಥಾಪಿಸಬಹುದು ; ಇದಕ್ಕೆ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿರುವ ಮಾನದಂಡಗಳೇನು ?

## ಮೈಸೂರು ರಿಂಗ್ ರೋಡ್ ಸುತ್ತಮುತ್ತ ತ್ಯಾಜ್ಯಗಳನ್ನು ಸುರಿಯುವುತ್ತಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩೯ (೭೮೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ರಿಂಗ್ ರೋಡ್ ಉದ್ದಕ್ಕೂ ಎರಡೂ ಬದಿಯಲ್ಲಿ ಕಟ್ಟಡ ತ್ಯಾಜ್ಯ, ಜೈವಿಕ ತ್ಯಾಜ್ಯಗಳನ್ನು ತಂದು ಸುರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಹಾಗೂ ರಿಂಗ್ ರಸ್ತೆಯ ಆವರಣವನ್ನು ಸ್ವಚ್ಛವಾಗಿಡಲು ಕೈಗೊಂಡಿರುವ ಕ್ರಮಗಳೇನು ;

(ಆ) ರಿಂಗ್ ರಸ್ತೆಯ ಉದ್ದಕ್ಕೂ ಮಧ್ಯದಲ್ಲಿ ಎಲ್.ಇ.ಡಿ. ಅಥವಾ ಸೋಡಿಯಂ ವೇಪರ್ ದೀಪಗಳನ್ನು ಅಳವಡಿಸಲು ಕ್ರಮ ಜರುಗಿಸಲಾಗುವುದೇ ;

(ಇ) ರಿಂಗ್ ರಸ್ತೆ ಪಕ್ಕ ಕಸ ಸುರಿಯುವವರನ್ನು ಪತ್ತೆ ಹಚ್ಚಲು ಅಪರಾಧ ಚಟುವಟಿಕೆಗಳನ್ನು ಹತ್ತಿಕ್ಕಲು ಅನುಕೂಲವಾಗುವಂತೆ, ಸಿಸಿಟಿವಿ ಕ್ಯಾಮೆರಾ ಅಳವಡಿಸಲು ಕ್ರಮ ಜರುಗಿಸಲಾಗುವುದೇ ?

60

## ಚಾಮರಾಜನಗರದಲ್ಲಿ ಒಳಚರಂಡಿ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೪೦ (೭೮೬) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದಲ್ಲಿ ಒಳಚರಂಡಿ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದೆಯೇ ;

(ಆ) ನಗರದ ಎಲ್ಲಾ ಮನೆಗಳಿಗೆ ನೂತನ ಒಳಚರಂಡಿ ಸಂಪರ್ಕ ಕಲ್ಪಿಸದಿರಲು ಕಾರಣಗಳೇನು ;

(ಇ) ನಗರದಲ್ಲಿ ತೆರೆದ ಚರಂಡಿ ನೀರು ಬೀದಿಗಳಲ್ಲಿ ಹರಿಯುತ್ತಿದ್ದು, ಕಲುಷಿತ ಅನೈರ್ಮಲ್ಯಕರ ವಾತಾವರಣ ಉಂಟಾಗಿರುವುದರಿಂದ ಕೂಡಲೇ ನಗರದ ಎಲ್ಲ ಮನೆಗಳಿಗೆ ಒಳಚರಂಡಿ ಸಂಪರ್ಕ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0158/500 ಪ್ರತಿಗಳು/02–03–2021